ಸಂಪುಟ : 11 ಸಂಚಿಕೆ: 36 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ್ 07 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 36 Pages : 4+2 Price : 3.00 Saturday March 07 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

ಡಂಬಳ ತೋಟಗಾರಿಕೆ ಕಾಲೇಜಿಗೆ ಗ್ರೀನ್ ಸಿಗ್ನಲ್– ಪ್ರವಾಸೋದ್ಯಮಕ್ಕೆ ಸೀಮಿತ ಬಲ

# ನೆರೆಯ ಜಿಲ್ಲೆಗಳಿಗೆ ಬಂಪರ್, ಗದಗಕ್ಕೆ ನಿರಾಸೆ




■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಬಜೆಟ್‌ನಲ್ಲಿ ಗದಗ ಜಿಲ್ಲೆಗೆ ಈ ಬಾರಿಯೂ ಅನ್ಯಾಯದ ಸರಣಿ ಮುಂದುವರಿದಿದ್ದು, ವಿಶೇಷ ಕೊಡುಗೆಗಳಿಲ್ಲದೆ ಜಿಲ್ಲೆಯ ಜನರಲ್ಲಿ ನಿರಾಸೆ ಮೂಡಿಸಿದೆ. ಹಿಂದಿನ ಬಜೆಟ್‌ನಂತೆ ಈ ಬಾರಿ ಕೂಡ ಗದಗ ಜಿಲ್ಲೆಗೆ ಹೊಸ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ಸಿಗದೆ, ಹಳೆಯ ಯೋಜನೆಗಳನ್ನೇ ಮುಂದುವರಿಸುವ ಕೆಲಸ ಮಾಡಲಾಗಿದೆ ಎಂಬ ಅಭಿಪ್ರಾಯ ಸಾರ್ವಜನಿಕರಲ್ಲಿ ವ್ಯಕ್ತವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ದಾಖಲೆಯ 17ನೇ ಬಜೆಟ್ ಮಂಡಿಸಿದ್ದರೂ, ಗದಗ ಜಿಲ್ಲೆಯ ಇತಿಹಾಸದಲ್ಲಿ ಗುರುತಾಗುವಂತಹ ಯಾವುದೇ ಮಹತ್ವದ ಯೋಜನೆಗಳನ್ನು ಘೋಷಿಸಿಲ್ಲ ಎನ್ನುವುದು ಜಿಲ್ಲೆಯ ಜನರ ಆಕ್ರೋಶವಾಗಿದೆ. ಕಳೆದ ಬಾರಿ ರೋಣ ವಿಧಾನಸಭೆ ಕ್ಷೇತ್ರದ ಮುಂಡರಗಿ ತಾಲೂಕಿನ ಡಂಬಳ ಗ್ರಾಮದಲ್ಲಿ ತೋಟಗಾರಿಕೆ ಕಾಲೇಜು ಸ್ಥಾಪನೆಗೆ ಕಾರ್ಯಸಾಧ್ಯತಾ ವರದಿ ಸಲ್ಲಿಸಲು ಸೂಚಿಸಲಾಗಿತ್ತು. ಆ ವರದಿ ಆಧಾರದ ಮೇಲೆ ಈ ಬಾರಿ ಕಾಲೇಜು ಸ್ಥಾಪನೆಗೆ ಪ್ರಥಮ ಹಂತದ ಮೂಲಸೌಕರ್ಯ ಕಾಮಗಾರಿ ಆರಂಭಿಸಲು ಗ್ರೀನ್ ಸಿಗ್ನಲ್ ನೀಡಲಾಗಿದೆ.


**ಇತರೆ ಘೋಷಣೆಗಳು :** ಹಿಂದಿನ ವರ್ಷಗಳ ಘೋಷಣೆಗಳಂತೆ ಗದಗ–ಕಪ್ಪತಗುಡ್ಡ–ಲಕ್ಕುಂಡಿ ಪ್ರವಾಸೋದ್ಯಮ ಸರ್ಕ್ಯೂಟ್ ಅಭಿವೃದ್ಧಿಗೆ ಮರು ಘೋಷಣೆ ಮಾಡಲಾಗಿದೆ. ಜೊತೆ–ಗೆ ರಾಮದುರ್ಗ, ▸▸3ನೇ ಪುಟಕ್ಕೆ

### ನಿರೀಕ್ಷೆಗಳು ಮತ್ತೆ ಹುಸಿ

ಈ ಬಾರಿಯ ಬಜೆಟ್‌ನಲ್ಲಿ ಗದಗ–ಯಲವಗಿ ರೈಲ್ವೆ ಮಾರ್ಗದ ಭೂಸ್ವಾಧೀನ, ಜವಳಿ ಪಾರ್ಕ್, ಶೀತಲಗೃಹ, ಕಪ್ಪತಗುಡ್ಡದಲ್ಲಿ ಆಯುರ್ವೇದ ಮಹಾವಿದ್ಯಾಲಯ ಸ್ಥಾಪನೆ, ರಿಂಗ್ ರೋಡ್, ಪ್ರವಾಸಿ ತಾಣಗಳ ಅಭಿವೃದ್ಧಿಗೆ ಅನುದಾನ ಹಾಗೂ ಗದಗ–ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ ಅನುದಾನ ಸೇರಿದಂತೆ ಅನೇಕ ನಿರೀಕ್ಷೆಗಳು ಮತ್ತೆ ಹುಸಿಯಾಗಿವೆ.

### ನೆರೆಯ ಜಿಲ್ಲೆಗಳಿಗೆ ಬಂಪರ್

ಈ ಬಾರಿಯ ಬಜೆಟ್‌ನಲ್ಲಿ ನೆರೆಯ ಕೊಪ್ಪಳ, ಬಾಗಲಕೋಟೆ, ವಿಜಯನಗರ ಹಾಗೂ ಹುಬ್ಬಳ್ಳಿ–ಧಾರವಾಡ ಜಿಲ್ಲೆಗಳಿಗೆ ಬಂಪರ್ ಕೊಡುಗೆಗಳು ದೊರೆತಿವೆ. ಅವುಗಳಿಗೆ ಹೋಲಿಸಿದರೆ ಗದಗ ಜಿಲ್ಲೆಗೆ ಸಿಕ್ಕಿರುವುದು ಅಲ್ಪ ಪ್ರಮಾಣ ಮಾತ್ರ ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ.




- ಮುಂಡರಗಿ ತಾಲೂಕಿನ ಡಂಬಳದಲ್ಲಿ ತೋಟಗಾರಿಕೆ ಕಾಲೇಜು ಸ್ಥಾಪನೆಗೆ ಮೊದಲ ಹಂತದ ಕಾಮಗಾರಿ
- ಗದಗ–ಕಪ್ಪತಗುಡ್ಡ–ಲಕ್ಕುಂಡಿ ಪ್ರವಾಸೋದ್ಯಮ ಸರ್ಕ್ಯೂಟ್ ಅಭಿವೃದ್ಧಿ
- ಗದಗದಲ್ಲಿ ಹೊಸ ಬಸ್ ನಿಲ್ದಾಣ
- ಶಿರಹಟ್ಟಿ ಹಾಗೂ ರೋಣ ಕ್ಷೇತ್ರದ ಕೆರೆ ತುಂಬಿಸುವ ಯೋಜನೆಗೆ ಅನುಮೋದನೆ
- ರೋಣ ಕ್ಷೇತ್ರದ ಕಾಲುವೆಗಳ ಆಧುನೀಕರಣ
- ಕಾರ್ಮಿಕ ಇಲಾಖೆಯಿಂದ ಗದಗ ಹಾಗೂ ರೋಣದಲ್ಲಿ ವಸತಿ ಶಾಲೆಗಳು
- ಗದಗದಲ್ಲಿ ಮೆಟ್ರಿಕ್ ನಂತರದ ಬಾಲಕರು ಮತ್ತು ಬಾಲಕಿಯರ ಹಾಸ್ಟೆಲ್

ಮುಂಗಡ ಪತ್ರಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಅಗತ್ಯ: ಪ್ರೊ. ಮಾರಪ್ಪ

## ವಿದ್ಯಾರ್ಥಿಗಳಿಂದ ರಾಜ್ಯ ಬಜೆಟ್ ನೇರ ಪ್ರಸಾರ ವೀಕ್ಷಣೆ




■ **ವಿಜಯಸಾಕ್ಷಿ ಸುದ್ದಿ, ಗಂಗಾವತಿ**

ನಗರದ ಎಸ್‌ಕೆಎನ್‌ಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅರ್ಥಶಾಸ್ತ್ರ ಮತ್ತು ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳಿಗೆ ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶದ ಸಹಯೋಗದಲ್ಲಿ ರಾಜ್ಯ ಬಜೆಟ್‌ನ ನೇರ ಪ್ರಸಾರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಯಿತು.

ಈ ಸಂದರ್ಭದಲ್ಲಿ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಜೆ. ಕೃಷ್ಣ ಹಾಗೂ ಡಾ. ಕೆ.ಎನ್. ರವಿ ಅವರು ರಾಜ್ಯದ ಮುಂಗಡ ಪತ್ರದ ಪ್ರಮುಖ ಅಂಶಗಳನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು. ಜೊತೆಗೆ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಈ ಸಾಲಿನ ಬಜೆಟ್‌ನಲ್ಲಿ ದೊರೆತಿರುವ ಸೌಲಭ್ಯಗಳ ಕುರಿತು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಪಾವಗಡದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಪ್ರೊ. ಮಾರಪ್ಪ ಕೆ.ಓ ಮಾತನಾಡಿ, ವಿದ್ಯಾರ್ಥಿಗಳಿಗೆ ಮುಂಗಡ ಪತ್ರದ ತಿಳುವಳಿಕೆ ಅತ್ಯಗತ್ಯವಾಗಿದ್ದು, ಪ್ರಚಲಿತ ಆರ್ಥಿಕ ವಿಷಯಗಳ ಕುರಿತು ಚರ್ಚೆ ಮತ್ತು ಸಂವಾದಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಶಿವರಾಜ ಗುರಿಕಾರ್ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಲು ಹಾಗೂ ದೇಶ ಮತ್ತು ರಾಜ್ಯದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುವ ಮುಂಗಡ ಪತ್ರಗಳ ಬಗ್ಗೆ ವಿದ್ಯಾರ್ಥಿಗಳು ಅರಿವು ಹೊಂದುವುದು ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಬಾರಿಕಾರ ಫಣಿರಾಜ್, ಉಪನ್ಯಾಸಕರಾದ ಡಾ. ಮಂಜುಳಾ ಪಾಟೀಲ್, ಡಾ. ಹನುಮಂತ, ಶ್ರೀಮತಿ ಸುನಂದ ಸತೀಶ್ ಸೇರಿದಂತೆ ಅರ್ಥಶಾಸ್ತ್ರ ಮತ್ತು ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ರಾಜ್ಯದ ಆರ್ಥಿಕತೆಯನ್ನು ಸಾಲದ ಹೊರೆಗೆ ತಳ್ಳಿದ ಬಜೆಟ್ – ಬಿಜೆಪಿ ಯುವ ಮುಖಂಡ ವಸಂತ ಪಡಗದ ಟೀಕೆ

## ಅಭಿವೃದ್ಧಿ ಶೂನ್ಯ, ಸಾಲದ ಗ್ಯಾರಂಟಿ ಕಳಪೆ ಬಜೆಟ್



■ **ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಮಂಡಿಸಿದ ದಾಖಲೆಯ 17ನೇ ಬಜೆಟ್ ಸಂಪೂರ್ಣ ಕಳಪೆಯಾಗಿದೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಟೀಕಿಸಿದ್ದಾರೆ.

'ಅಹಿಂದ' ಎಂಬ ಘೋಷಣೆ ನೀಡುವ ಸರ್ಕಾರ ರಾಜ್ಯದ ಆರ್ಥಿಕತೆಯನ್ನು ಹೆಚ್ಚುವರಿ ಸಾಲದ ಮೂಲಕ ಹಾಳು ಮಾಡುತ್ತಿರುವ ಜನವಿರೋಧಿ ಬಜೆಟ್ ಮಂಡಿಸಿದೆ ಎಂದು ಅವರು ಆರೋಪಿಸಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಅಭಿವೃದ್ಧಿ ಎಂಬ ಪದದ ಅರ್ಥವನ್ನೇ ಕಾಂಗ್ರೆಸ್ ಸರ್ಕಾರ ಮರೆತಿದೆ. 2026–27ರ ಬಜೆಟ್ ಕನ್ನಡಿಗರಿಗೆ ಸಾಲದ ಸುಳಿ ಮತ್ತು ತೆರಿಗೆಯ ಹೊರೆಯನ್ನು ಮಾತ್ರ ನೀಡಿದೆ" ಎಂದು ಹೇಳಿದರು.

ರಾಜ್ಯದ ಒಟ್ಟು ರಾಜಸ್ವ ಆದಾಯದ ಸುಮಾರು 88 ರಿಂದ 90 ಶೇಕಡಾ ಹಣ ಸಂಬಳ, ಪೆನ್ಷನ್ ಹಾಗೂ ಸಾಲದ ಬಡ್ಡಿ ಪಾವತಿಗೆ ವ್ಯಯವಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಹೊಸ ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ತರಲು ಸರ್ಕಾರದ ಬಳಿ ಹಣವೇ ಇಲ್ಲದಂತಾಗಿದೆ. ▸▸3ನೇ ಪುಟಕ್ಕೆ

### ಗದಗ ಜಿಲ್ಲೆಗೆ ನಿರಾಸೆ

ಕಳೆದ ಸಾಲಿನಲ್ಲೇ ಡಂಬಳದಲ್ಲಿ ತೋಟಗಾರಿಕೆ ಇಲಾಖೆ ಸ್ಥಾಪನೆ ಘೋಷಣೆ ಮಾಡಲಾಗಿತ್ತು. ಈ ಬಾರಿ ಬಜೆಟ್‌ನಲ್ಲಿ ಕೇವಲ ಮೂಲಭೂತ ಸೌಕರ್ಯಗಳ ಬಗ್ಗೆ ಪ್ರಸ್ತಾಪ ಮಾತ್ರ ಮಾಡಲಾಗಿದೆ.

ಲಕ್ಕುಂಡಿಗೆ ವಿಶೇಷ ಅನುದಾನ ಮೀಸಲು ಮಾಡಬೇಕಿದ್ದರೂ ಅದು ಈಡೇರಿಲ್ಲ. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಯೋಜನೆಗಳಿಲ್ಲ. ಕಳಸಾ–ಬಂಡೂರಿ ಯೋಜನೆ ಚಾಲನೆ ಕುರಿತು ಸರ್ಕಾರ ಮೌನವಾಗಿದೆ.

ಇದೇ ರೀತಿ ಗದಗ–ಬೆಟಗೇರಿ ಅವಳಿ ನಗರ ಹೊರ ವರ್ತುಲ ರಸ್ತೆ, ಕುಡಿಯುವ ನೀರಿಗೆ ಶಾಶ್ವತ ಪರಿಹಾರ, ಪುಟ್ಟರಾಜ ಗವಾಯಿಗಳ ಸ್ಮಾರಕ ಭವನ ನಿರ್ಮಾಣಕ್ಕೆ ಅನುದಾನ ಸೇರಿದಂತೆ ಯಾವುದೇ ವಿಶೇಷ ಪ್ಯಾಕೇಜ್ ನೀಡದೆ ಜಿಲ್ಲೆಯ ಜನರಿಗೆ ಅನ್ಯಾಯ ಮಾಡಲಾಗಿದೆ ಎಂದು ಅವರು ಆರೋಪಿಸಿದರು.

ಹೊಸ ನೇಮಕಾತಿ ಪ್ರಕ್ರಿಯೆ ಸ್ಥಗಿತಕ್ಕೆ ಒತ್ತಾಯ; ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ

## ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿಯನ್ನು ಸಂಪೂರ್ಣವಾಗಿ ಜಾರಿಗೆ ತರಬೇಕು ಎಂದು ಆಗ್ರಹಿಸಿ ಗದಗ ಜಿಲ್ಲಾ ಮಾದಿಗ ಸಂಘಟನೆಗಳ ಒಕ್ಕೂಟ ಹಾಗೂ ಕರ್ನಾಟಕ ಪ್ರದೇಶ ಮಾದಿಗ ಸಂಘದ ತಾಲೂಕು ಘಟಕಗಳ ವತಿಯಿಂದ ಶುಕ್ರವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಹೊಸ ಬಸ್ ನಿಲ್ದಾಣದ ಎದುರು ಜಮಾಯಿಸಿ ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಸುರೇಶ್ ನಂದೆಣ್ಣವರ, ಕೋಟೆಪ್ಪ ವರ್ದಿ ಮತ್ತು ಫಕೀರೇಶ ಮ್ಯಾಟಣ್ಣವರ ಮಾತನಾಡಿ, ರಾಜ್ಯ ಸರ್ಕಾರವು ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸುಮಾರು 56,432 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಆರಂಭಿಸಲು ಕ್ರಮ ಕೈಗೊಂಡಿದೆ. ಆದರೆ ಸಚಿವ ಸಂಪುಟದ ತೀರ್ಮಾನದಂತೆ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಯಾಗುವವರೆಗೆ ಯಾವುದೇ ಹೊಸ ನೇಮಕಾತಿಗೆ ಅಧಿಸೂಚನೆ ಹೊರಡಿಸಬಾರದು ಎಂದು 2024ರ ನವೆಂಬರ್ 25ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸುತ್ತೋಲೆ ಹೊರಡಿಸಿದೆ ಎಂದು ಹೇಳಿದರು.

ಇಂತಹ ಸಂದರ್ಭದಲ್ಲಿ ನೇಮಕಾತಿ ಪ್ರಕ್ರಿಯೆ ಆರಂಭಿಸುವುದು ಮಾದಿಗ ಸಮುದಾಯಕ್ಕೆ ಅನ್ಯಾಯವಾಗುತ್ತದೆ ಎಂದು ಅವರು ಆರೋಪಿಸಿದರು. ನ್ಯಾ. ಹೆಚ್.ಎನ್. ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಂತೆ ಪ್ರವರ್ಗ (ಎ) ವರ್ಗಕ್ಕೆ ಶೇ.6 ರಷ್ಟು ಹುದ್ದೆಗಳನ್ನು ಮೀಸಲಿಡಬೇಕು ಹಾಗೂ ಜನಸಂಖ್ಯೆಗೆ ▸▸4ನೇ ಪುಟಕ್ಕೆ

## ಆರೋಗ್ಯ ಇಲಾಖೆ ನೌಕರರಿಂದ ಅನಿರ್ದಿಷ್ಟಾವಧಿ ಮುಷ್ಕರದ ಎಚ್ಚರಿಕೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿ ಆರೋಗ್ಯ ಇಲಾಖೆ ಸಿಬ್ಬಂದಿ ಉಪತಹಶೀಲ್ದಾರ ಪ್ರಶಾಂತ ಅವರಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ, ಕರ್ನಾಟಕ ರಾಜ್ಯ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖಾ ನೌಕರರ ಕೇಂದ್ರ ಸಂಘ ಹಾಗೂ ಇಲಾಖೆಯ ವಿವಿಧ ವೃಂದ ಸಂಘಗಳ ಆಶ್ರಯದಲ್ಲಿ ಮನವಿ ಸಲ್ಲಿಸಲಾಯಿತು. ಸರ್ಕಾರದ ಆದೇಶದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರತಿ ಮೂರು ವರ್ಷಕ್ಕೊಮ್ಮೆ ತಿದ್ದುಪಡಿ ಮಾಡಬೇಕಾಗಿದ್ದರೂ, 1973ರಿಂದ ಇಂದಿನವರೆಗೂ ಆರೋಗ್ಯ ಇಲಾಖೆಯಲ್ಲಿ ಅದನ್ನು ಪರಿಷ್ಕರಿಸದಿರುವುದಾಗಿ ಅವರು ಆರೋಪಿಸಿದರು.

ಇದೇ ವೇಳೆ ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಕಾಲಕಾಲಕ್ಕೆ ಸಮರ್ಪಕ ಔಷಧ ಸರಬರಾಜು ಆಗದೇ ಇರುವುದೂ ಸೇರಿದಂತೆ ಹಲವು ಸಮಸ್ಯೆಗಳು ಎದುರಾಗಿವೆ ಎಂದು ತಿಳಿಸಿದರು.

ತಾಲ್ಲೂಕು ವೈದ್ಯಾಧಿಕಾರಿ ಡಾ. ಸುಭಾಷ ದಾಯಗೊಂಡ ಮಾತನಾಡಿ, ಇಲಾಖೆಯ ಎಲ್ಲ ವೃಂದಗಳ ಜೇಷ್ಠತಾ ಪಟ್ಟಿಯನ್ನು ಇನ್ನೂ ಪ್ರಕಟಿಸಿಲ್ಲ. ಕಳೆದ ಐದು ವರ್ಷಗಳಿಂದ ಯಾವುದೇ ಅಧಿಕಾರಿ ಅಥವಾ ನೌಕರರಿಗೆ ಮುಂಬಡ್ತಿ ನೀಡಿಲ್ಲ. ಅವೈಜ್ಞಾನಿಕವಾಗಿ ವರ್ಗಾವಣೆ ಮಾಡಲಾಗುತ್ತಿದೆ. ಕೇಂದ್ರ ಪುರಸ್ಕೃತ ಯೋಜನೆಯಡಿ ಕೆಲಸ ಮಾಡುತ್ತಿರುವ ಸುಮಾರು ಆರು ಸಾವಿರ ನೌಕರರಿಗೆ ಹಲವಾರು ವರ್ಷಗಳಿಂದ 3–4 ತಿಂಗಳಿಗೊಮ್ಮೆ ಮಾತ್ರ ವೇತನ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಈ ಎಲ್ಲ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮಾ.11ರಿಂದ ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತು ನೌಕರರು ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಲಿದ್ದಾರೆ. ಮಾ.11ರಿಂದ 15ರವರೆಗೆ ಕಪ್ಪುಪಟ್ಟಿ ಧರಿಸಿ ಹೊರರೋಗಿಗಳಿಗೆ ಸೇವೆ ನೀಡದೆ ಕೇವಲ ತುರ್ತು ಸೇವೆ ಮಾತ್ರ ನೀಡಲಾಗುವುದು. ಆಗಲೂ ಬೇಡಿಕೆಗಳನ್ನು ಈಡೇರಿಸದಿದ್ದರೆ ಮಾ.16ರಿಂದ ಅನಿರ್ದಿಷ್ಟಾವಧಿವರೆಗೆ ಕರ್ತವ್ಯಕ್ಕೆ ಗೈರು ಹಾಜರಾಗುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಮುದಾಯ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ, ವೈದ್ಯರಾದ ಪ್ರವೀಣ ಸಜ್ಜನರ, ಫಕ್ಕೀರೇಶ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಗುರುರಾಜ ಹವಳದ, ಎಫ್.ಬಿ. ಹೂಗಾರ, ಎಫ್.ಸಿ. ಹೊಸಮಠ, ಮಹಮ್ಮದ್ ಹನೀಫ್ ಶಿರಹಟ್ಟಿ, ಪ್ರಕಾಶ ಕರ್ಜಗಿ, ತೀರ್ಥರಾಜ, ವಿಜಯ ಮಾಂಡ್ರೆ, ರವಿ ಕೊಪ್ಪದ, ಫಕ್ಕೀರೇಶ ಜಂತ್ಲಿ, ಸುನಿಲ ಚವ್ಹಾಣ, ಗುರು ಹುಲಗೂರ, ರವಿ ಪುತಳೀಕರ, ಗಂಗಾಧರ ಬಣಕಾರ, ಬಸವರಾಜ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಆರೋಗ್ಯ ಇಲಾಖೆಯ ವಿವಿಧ ಬೇಡಿಕೆಗಳನ್ನು ಈಡೇರಿಸದಿದ್ದರೆ ಮಾ.11ರಿಂದ ರಾಜ್ಯಾದ್ಯಂತ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುವುದು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತು ನೌಕರರು ಎಚ್ಚರಿಕೆ ನೀಡಿದ್ದಾರೆ. ಮಾ.11ರಿಂದ 15ರವರೆಗೆ ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಲಾಗುವುದು. ಈ ಅವಧಿಯಲ್ಲಿ ಹೊರರೋಗಿಗಳಿಗೆ ಸೇವೆ ನೀಡದೆ ಕೇವಲ ತುರ್ತು ಸೇವೆ ಮಾತ್ರ ಒದಗಿಸಲಾಗುವುದು ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

## ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದು ಅಗತ್ಯ - ಅನಿಲ ಖಟವಟೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಸ್.ಎಸ್.ಕೆ. ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ವಿಶ್ವರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಜ್ಞಾನ ವಸ್ತುಪ್ರದರ್ಶನ ಆಯೋಜಿಸಲಾಯಿತು.

ಎಸ್.ಎಸ್.ಕೆ. ಶಿಕ್ಷಣ ಕೇಂದ್ರದ ಕಾರ್ಯದರ್ಶಿ ವಿನೋದ ಆರ್. ಶಿದ್ಲಿಂಗ್ ಅವರು ವಿದ್ಯಾರ್ಥಿಗಳಿಂದ ಸಿದ್ಧಪಡಿಸಲಾದ ವಿಜ್ಞಾನ ಮಾದರಿಗಳನ್ನು ಕುತೂಹಲದಿಂದ ವೀಕ್ಷಿಸಿದರು. ಶಾಲಾ ಚೇರ್ಮನ್ ಅನಿಲ ಖಟವಟೆ ವಿಜ್ಞಾನ ದಿನಾಚರಣೆಯ ಮಹತ್ವವನ್ನು ಮಕ್ಕಳಿಗೆ ವಿವರಿಸಿದರು.

ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಆರ್.ಡಿ. ಕೋಟಿಯವರು ಹಾಗೂ ಐ.ಎಸ್. ಸರಗಣಾಚಾರಿ ಸಂಸ್ಥೆಯ ಶಿಕ್ಷಕರ ಕಾರ್ಯನಿರ್ವಹಣೆ ಹಾಗೂ ಮಕ್ಕಳ ಸೃಜನಾತ್ಮಕ ಚಟುವಟಿಕೆಗಳನ್ನು ಶ್ಲಾಘಿಸಿದರು. ಬಿ.ಇಡಿ ಪ್ರಶಿಕ್ಷಣಾರ್ಥಿಗಳು ಪ್ರಯೋಗ ಪ್ರಾತ್ಯಕ್ಷಿಕೆಗಳಲ್ಲಿ ಮಕ್ಕಳಿಗೆ ಮಾರ್ಗದರ್ಶನ ನೀಡಿದರು. 1ರಿಂದ 10ನೇ ತರಗತಿಯ ಶಿಕ್ಷಕರು ಉಪಸ್ಥಿತರಿದ್ದರು.

## ನಿರಾಶಾದಾಯಕ ಬಜೆಟ್ : ಗಂಗಣ್ಣ ಮಹಾಂತಶೆಟ್ಟರ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್‌ನಲ್ಲಿ ಯಾವುದೇ ಹೊಸತನವಿಲ್ಲ. ರೈತರು ಹಾಗೂ ಜನಸಾಮಾನ್ಯರಿಗೆ ಹೊರೆಯಾಗುವ ರೀತಿಯ ಬಜೆಟ್ ಇದಾಗಿದೆ ಎಂದು ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಅಭಿಪ್ರಾಯಪಟ್ಟರು.

ಸತತ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ರಾಜ್ಯದ ಜನತೆಗೆ ಈ ಬಜೆಟ್ ನಿರಾಶಾದಾಯಕವಾಗಿದೆ. ಅಲ್ಲದೆ ಉತ್ತರ ಕರ್ನಾಟಕವನ್ನು ಮತ್ತೆ ಕಡೆಗಣಿಸಿರುವುದೂ ಸ್ಪಷ್ಟವಾಗಿ ಕಾಣಿಸುತ್ತಿದೆ. ಅಲ್ಪಸಂಖ್ಯಾತರನ್ನು ಓಲೈಸುವ ಉದ್ದೇಶದಿಂದ ರೂಪಿಸಿದ ಬಜೆಟ್ ಆಗಿದೆ ಎಂದು ಅವರು ಆರೋಪಿಸಿದರು.

## ಆಕರ್ಷಕ ಹಾಗೂ ಜನಪರ ಬಜೆಟ್ : ಟಿ. ಈಶ್ವರ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ದಾಖಲೆಯ 17ನೇ ಬಜೆಟ್ ಮಂಡಿಸಿದ್ದು, ಇದು ದೇಶದಲ್ಲಿಯೇ ಅತ್ಯುತ್ತಮ ಹಾಗೂ ಆಕರ್ಷಕ ಬಜೆಟ್ ಆಗಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಟಿ. ಈಶ್ವರ ಹೇಳಿದರು.

ಸರ್ಕಾರಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಂಡಿರುವುದು, ಶಿಕ್ಷಣ, ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರಗಳಿಗೆ ಆದ್ಯತೆ ನೀಡಿರುವುದು ಶ್ಲಾಘನೀಯ. ಬೆಳೆಗಳಿಗೆ ವಿಮೆ, ಹನಿ ನೀರಾವರಿ ಯೋಜನೆಗಳಿಗೆ ಪ್ರೋತ್ಸಾಹ ನೀಡಿರುವುದು ರೈತರಿಗೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಅಲ್ಲದೆ ಸರ್ವರಿಗೂ ವಿಶೇಷ ಆರೋಗ್ಯ ಯೋಜನೆ, ಕೈಗಾರಿಕಾ ವಲಯದಲ್ಲಿ ಅಮೂಲ್ಯ ಬದಲಾವಣೆಗಳಿಗೆ ಅವಕಾಶ ಕಲ್ಪಿಸಿರುವುದು ಗಮನಾರ್ಹವಾಗಿದೆ. ವಿಶೇಷವಾಗಿ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಗೆ ನಿರ್ಬಂಧ ಹಾಗೂ ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆ ನಿಷೇಧಿಸಿರುವುದು ಶ್ರೇಷ್ಠ ನಿರ್ಧಾರವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

### ರಾಷ್ಟ್ರ ಜಾಗೃತಿ ಸಭೆಯಲ್ಲಿ ಗುರುಪ್ರಸಾದ ಗೌಡ ಕರೆ

# ಹಿಂದೂಗಳು ಜಾತಿ-ಪಂಥ ಮರೆತು ಸಂಘಟಿತರಾಗಬೇಕು




ಗ್ರಾಮದ ಶಾಖಾಂಬರಿ ಸಮುದಾಯ ಭವನದಲ್ಲಿ ನಡೆದ ಹಿಂದೂ ಜನಜಾಗೃತಿ ಸಮಿತಿಯ ರಾಷ್ಟ್ರ-ಜಾಗೃತಿ ಸಭೆಯಲ್ಲಿ ಮಾತನಾಡಿದ ರಾಜ್ಯ ಸಮನ್ವಯಕ ಗುರುಪ್ರಸಾದ ಗೌಡ, ಸನಾತನ ಧರ್ಮವು ಕೇವಲ ಹಿಂದೂಗಳಿಗೆ ಮಾತ್ರವಲ್ಲದೆ ಪ್ರತಿಯೊಬ್ಬರಿಗೂ ಮಾನವೀಯ ಮೌಲ್ಯಗಳನ್ನು ಸಾರುವ ಧರ್ಮವಾಗಿದೆ ಎಂದರು. ಹಿಂದೂ ಸಮಾಜದ ಮೇಲೆ ನಡೆಯುತ್ತಿರುವ ಗೋಹತ್ಯೆ, ಧರ್ಮ ಅಪಮಾನ, ಹಲ್ಲೆ, ಬಲವಂತದ ಮತಾಂತರ ಸೇರಿದಂತೆ ಅನ್ಯಾಯಗಳ ವಿರುದ್ಧ ಸಮಾಜ ಜಾಗೃತಿಯಾಗಬೇಕು. ಹಿಂದೂಗಳು ಜಾತಿ-ಪಂಥ ಮರೆತು ಸಂಘಟಿತರಾಗಿ ಪ್ರತಿದಿನ ಧರ್ಮಕಾರ್ಯಗಳಿಗೆ ಸಮಯ ಮೀಸಲಿಡಬೇಕು ಎಂದು ಅವರು ಕರೆ ನೀಡಿದರು. ಹಿಂದೂ ರಾಷ್ಟ್ರ ನಿರ್ಮಾಣದ ಸಂಕಲ್ಪದೊಂದಿಗೆ ಸಮಾಜ ಒಗ್ಗಟ್ಟಾಗಬೇಕೆಂದು ಅವರು ಅಭಿಪ್ರಾಯಪಟ್ಟರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸನಾತನ ಧರ್ಮವು ಕೇವಲ ಹಿಂದೂಗಳಿಗೆ ಮಾತ್ರ ಸೀಮಿತವಲ್ಲದೆ ಈ ಭೂಮಿಯ ಮೇಲಿರುವ ಪ್ರತಿಯೊಬ್ಬರಿಗೂ ಮಾನವೀಯ ಮೌಲ್ಯಗಳನ್ನು ಸಾರುವ ಧರ್ಮವಾಗಿದೆ. ಇಂತಹ ಸನಾತನ ಧರ್ಮವನ್ನು ನಾಶ ಮಾಡಲು ನಡೆಯುತ್ತಿರುವ ಪ್ರಯತ್ನಗಳು ಅತ್ಯಂತ ಬೇಸರದ ಸಂಗತಿಯಾಗಿದೆ ಎಂದು ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ಸಮನ್ವಯಕ ಗುರುಪ್ರಸಾದ ಗೌಡ ಹೇಳಿದರು.

ತಾಲೂಕಿನ ಶಿಗ್ಲಿ ಗ್ರಾಮದ ಶಾಖಾಂಬರಿ ಸಮುದಾಯ ಭವನದಲ್ಲಿ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ಆಯೋಜಿಸಿದ್ದ ರಾಷ್ಟ್ರ-ಜಾಗೃತಿ ಸಭೆಯಲ್ಲಿ ಅವರು ಮಾತನಾಡಿದರು.

ಇಂದು ಹಿಂದೂ ಸಮಾಜದ ಮೇಲೆ ವಿವಿಧ ರೀತಿಯ ಆಘಾತಗಳು ನಡೆಯುತ್ತಿವೆ. ಗೋಹತ್ಯೆ, ದೇವರ ವಿಡಂಬನೆ, ಅಪಮಾನ, ಅತ್ಯಾಚಾರ ಹಾಗೂ ಹಲ್ಲೆಗಳಂತಹ ಘಟನೆಗಳ ಬಗ್ಗೆ ಜಾಗೃತಿ ಮೂಡಿಸಲು ಸಮಿತಿ ಕಳೆದ 23 ವರ್ಷಗಳಿಂದ ಧರ್ಮಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ ಎಂದು ಹೇಳಿದರು. ಅಯೋಧ್ಯೆಯಲ್ಲಿ ರಾಮಮಂದಿರದ ಮೇಲೆ ಭಗವಾ ಧ್ವಜಾರೋಹಣವಾದ ನಂತರ ಹಿಂದೂ ರಾಷ್ಟ್ರ ಸ್ಥಾಪನೆಯ ಯುಗದ ಆರಂಭವಾಗಿದೆ ಎಂಬುದನ್ನು ಇದು ಸೂಚಿಸುತ್ತದೆ ಎಂದರು.

ಹಿಂದೂ ರಾಷ್ಟ್ರ ಸ್ಥಾಪನೆಗಾಗಿ ಹಿಂದೂಗಳು ಜಾತಿ-ಪಂಥ ಭೇದ ಮರೆತು ಸಂಘಟಿತರಾಗಬೇಕು. ಕೇವಲ ಭಾಷಣಕ್ಕೆ ಸೀಮಿತವಾಗದೆ ಪ್ರತಿದಿನ ಕನಿಷ್ಠ ಒಂದು ಗಂಟೆ ಧರ್ಮಕಾರ್ಯಗಳಿಗೆ ಮೀಸಲಿಡಬೇಕು. ದೇವಸ್ಥಾನಗಳ ಸರ್ಕಾರಿಕರಣ, ವಕ್ಫ್ ಕಾನೂನಿನ ದುರ್ಬಳಕೆ, ಲವ್ ಜಿಹಾದ್, ಹಲಾಲ್ ಜಿಹಾದ್ ಹಾಗೂ ಬಲವಂತದ ಮತಾಂತರದಂತಹ ಸಮಸ್ಯೆಗಳ ವಿರುದ್ಧ ಸಮಾಜ ಜಾಗೃತಿಯಾಗಬೇಕಿದೆ ಎಂದು ಹೇಳಿದರು.

ಯುವ ಮುಖಂಡ ಆದೇಶ ಹುಲಗೂರು ಮಾತನಾಡಿ, ಭಾರತದಲ್ಲಿ ಗುರುಕುಲ ಪದ್ಧತಿಯನ್ನು ಪುನಃ ಸ್ಥಾಪಿಸುವ ಅವಶ್ಯಕತೆ ಇದೆ. ಹಿಂದೂ ಸಮಾಜ ಜಾತಿ-ಪಂಥದ ಭೇದ ಮರೆತು ಒಂದಾಗಿ ಬಂದರೆ ಸಮಾಜದ ಮೇಲೆ ನಡೆಯುತ್ತಿರುವ ಅನ್ಯಾಯಗಳ ವಿರುದ್ಧ ಹೋರಾಡಲು ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ಲಕ್ಷ್ಮೀ ತಟ್ಟಿ, ಅಶೋಕ ಭೋಜ, ಶೋಭಾ ಇಟಗಿ, ಶಾಂತಾ ಹುಲಕೋಟಿ, ಪ್ರಕಾಶ ಬೆಟಗೇರಿ, ರಮೇಶ ಬೂದಿಹಾಳ, ಸುರೇಶ ಗೋಧಿ, ಕೃಷ್ಣ ಬಡ್ನಿ, ನಿಲಾಂಬಿಕಾ ಹಡಪದ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸುಮಾ ಕುಂಬಾರ ಹಾಗೂ ಪ್ರವೀಣ ಬೆನ್ನೂರು ಕಾರ್ಯಕ್ರಮ ನಿರೂಪಿಸಿದರು. ನೂರಾರು ಹಿಂದೂ ಬಾಂಧವರು ಸಭೆಯಲ್ಲಿ ಭಾಗವಹಿಸಿದ್ದರು.

## ವಾಲ್ಮೀಕಿ ಶ್ರೀಗಳ ಆರೋಗ್ಯ ವಿಚಾರಿಸಿದ ಭೀಮ ನಾಯ್ಕ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ರಾಜನಹಳ್ಳಿಯ ವಾಲ್ಮೀಕಿ ಗುರುಪೀಠದ ಪೀಠಾಧಿಪತಿಗಳಾದ ಡಾ. ಪ್ರಸನ್ನ ನಂದಪುರಿ ಮಹಾಸ್ವಾಮಿಗಳವರ ಆರೋಗ್ಯ ಕ್ಷೇಮವನ್ನು ಕೆಎಂಎಫ್ ಬಳ್ಳಾರಿ ಮಾಜಿ ಅಧ್ಯಕ್ಷ ಭೀಮ ನಾಯ್ಕ ವಿಚಾರಿಸಿದರು.

ಮಡಿವಾಳ ಗುರುಪೀಠದ ಪೀಠಾಧಿಪತಿ ಬಸವ ಮಾಚಿದೇವ ಪರಮಪೂಜ್ಯರ ದಿವ್ಯ ಉಪಸ್ಥಿತಿಯಲ್ಲಿ ಭೀಮ ನಾಯ್ಕ ಅವರು ವಾಲ್ಮೀಕಿ ಶ್ರೀಗಳನ್ನು ಭೇಟಿ ಮಾಡಿ ಕುಶಲೋಪಚಾರಿ ವಿಚಾರಿಸಿದರು. ಈ ಸಂದರ್ಭದಲ್ಲಿ ಉಭಯ ಶ್ರೀಗಳನ್ನು ಸತ್ಕರಿಸಿ, ಶ್ರೀಗಳು ಶೀಘ್ರವಾಗಿ ಸಂಪೂರ್ಣ ಗುಣಮುಖರಾಗಲಿ ಎಂದು ಪ್ರಾರ್ಥಿಸಿದರು.

ನಂತರ ಮಾತನಾಡಿದ ಅವರು, ವಾಲ್ಮೀಕಿ ಶ್ರೀಗಳು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದು, ಈಗ ಚೇತರಿಸಿಕೊಳ್ಳುತ್ತಿದ್ದಾರೆ. ವಾಲ್ಮೀಕಿ ಸಮುದಾಯ ಸೇರಿದಂತೆ ಸಮಾಜದ ಹಾಗೂ ಲೋಕ ಕಲ್ಯಾಣಕ್ಕಾಗಿ ತಮ್ಮ ಜೀವನವನ್ನೇ ಸಮರ್ಪಿಸಿ ಸೇವೆ ಸಲ್ಲಿಸುತ್ತಿರುವ ಶ್ರೀಗಳ ಮಾರ್ಗದರ್ಶನ ಸಮುದಾಯಕ್ಕೆ ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು. ಮಹಾಸ್ವಾಮೀಜಿಗಳು ಆದಷ್ಟು ಬೇಗ ಸಂಪೂರ್ಣ ಆರೋಗ್ಯವನ್ನು ಪಡೆದು ಮತ್ತೆ ಭಕ್ತರ ಸೇವೆಯಲ್ಲಿ ತೊಡಗಿಕೊಳ್ಳಲಿ ಎಂದು ಆಶಿಸಿದರು. ಈ ಸಂದರ್ಭದಲ್ಲಿ ಹಗರಿಬೊಮ್ಮನಹಳ್ಳಿ ವಾಲ್ಮೀಕಿ ಸಮಾಜದ ತಾಲೂಕು ಅಧ್ಯಕ್ಷ ಪವಾಡಿ ಹನುಮಂತಪ್ಪ, ಆರ್‌ಎಸ್‌ಎಸ್‌ಎನ್ ಬ್ಯಾಂಕ್ ಅಧ್ಯಕ್ಷ ದಾದಮ್ಮನವರ ಬಸವರಾಜ್, ವಾಲ್ಮೀಕಿ ಸಮಾಜದ ಮುಖಂಡರಾದ ಸೆರಗಾರ್ ಹುಚ್ಚಪ್ಪ, ಪುರಸಭೆ ನಾಮ ನಿರ್ದೇಶಕ ಬಾರಕೇರ ಮಂಜುನಾಥ್, ತ್ಯಾವಣಿಗಿ ಕೊಟ್ರೇಶ್, ಮೂಲಿಮನಿ ಶಾರುಖ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜನಸಾಮಾನ್ಯರ ಪರ ಸಿದ್ದರಾಮಯ್ಯ 17ನೇ ಬಜೆಟ್ - ಹುಡೇದ ಗುರುಬಸವರಾಜ ಪ್ರಶಂಸೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ 17ನೇ ಬಜೆಟ್ ಮಂಡನೆ ಮಾಡಿರುವುದು ಐತಿಹಾಸಿಕ ಸಾಧನೆಯಾಗಿದೆ ಎಂದು ವಿಜಯನಗರ ಜಿಲ್ಲಾ ಕಾಂಗ್ರೆಸ್ ವಕ್ತಾರ ಹುಡೇದ ಗುರುಬಸವರಾಜ ತಿಳಿಸಿದ್ದಾರೆ.

2026-27ನೇ ಸಾಲಿನ ಆಯವ್ಯಯವು ರಾಜ್ಯದ ಎಲ್ಲಾ ಭಾಗಗಳ ಜನತೆಗೆ, ಎಲ್ಲಾ ವರ್ಗದವರಿಗೆ ಹಾಗೂ ವಿವಿಧ ವಲಯಗಳಿಗೆ ಸಮಾನವಾಗಿ ತಲುಪುವಂತೆ ರೂಪಿಸಲಾಗಿದೆ. ಇದು ಜನಸಾಮಾನ್ಯರ ಹಿತವನ್ನು ಗಮನದಲ್ಲಿಟ್ಟುಕೊಂಡು ಮಂಡಿಸಲಾದ ಉತ್ತಮ ಬಜೆಟ್ ಆಗಿದೆ ಎಂದು ಅವರು ಹೇಳಿದ್ದಾರೆ.

ವಿಶೇಷವಾಗಿ ಬಸವಕಲ್ಯಾಣದಲ್ಲಿ ವಚನ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಸುಮಾರು 25 ಎಕರೆ ಭೂಮಿ ನೀಡಿರುವುದು ಹಾಗೂ ವಿಜಯನಗರ ಜಿಲ್ಲೆಗೆ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ಘೋಷಿಸಿರುವುದು ಶ್ಲಾಘನೀಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಇದಲ್ಲದೆ, 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳ ಬಳಕೆಗೆ ನಿರ್ಬಂಧ ಹೇರಲು ಸರ್ಕಾರ ಮುಂದಾಗಿರುವುದು ಉತ್ತಮ ಕ್ರಮವಾಗಿದ್ದು, ಇದು ಮಕ್ಕಳ ಭವಿಷ್ಯವನ್ನು ಕಾಪಾಡುವ ದೃಷ್ಟಿಯಿಂದ ಮಹತ್ವದ್ದಾಗಿದೆ ಎಂದು ಹೇಳಿದರು.

ಒಟ್ಟಾರೆಯಾಗಿ ಈ ಬಜೆಟ್ ರಾಜ್ಯದ ಎಲ್ಲಾ ವರ್ಗದ ಜನರನ್ನು ತಲುಪುವ ಜನಪರ ಆಯವ್ಯಯವಾಗಿದೆ ಎಂದು ಹುಡೇದ ಗುರುಬಸವರಾಜ ತಿಳಿಸಿದ್ದಾರೆ.

**ಹಗರಿಬೊಮ್ಮನಹಳ್ಳಿ:** ಪವಿತ್ರ ರಂಜಾನ್ ಮಾಸದ ಅಂಗವಾಗಿ ಹಗರಿಬೊಮ್ಮನಹಳ್ಳಿ ಪಟ್ಟಣದ ರಾಮನಗರ ಮಸೀದಿಯಲ್ಲಿ ರೋಜಾ ಇರುವ ಮುಸ್ಲಿಂ ಬಾಂಧವರಿಗೆ ಖರ್ಜೂರ ವಿತರಣೆ ಮಾಡಲಾಯಿತು. ಪುರಸಭೆಯ ನೈರ್ಮಲ್ಯ ಮೇಸ್ತ್ರಿಯಾಗಿರುವ ವೀರಣ್ಣ ವಲ್ಲಭಾಪುರ ಅವರು ಸ್ವಯಂಪ್ರೇರಿತರಾಗಿ ಮಸೀದಿಗೆ ಭೇಟಿ ನೀಡಿ ರೋಜಾ ಇರುವ ಮುಸ್ಲಿಂ ಬಾಂಧವರಿಗೆ ಖರ್ಜೂರ ವಿತರಿಸಿದರು. ಈ ಸಂದರ್ಭದಲ್ಲಿ ಮುಸ್ಲಿಂ ಬಾಂಧವರು ಅವರಿಗೆ ಕೃತಜ್ಞತೆ ಸಲ್ಲಿಸಿ ಶುಭ ಹಾರೈಸಿದರು. ಪವಿತ್ರ ರಂಜಾನ್ ಮಾಸದಲ್ಲಿ ಇಂತಹ ಸೇವಾ ಕಾರ್ಯಗಳು ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಉತ್ತೇಜಿಸುತ್ತವೆ ಎಂದು ಮುಸ್ಲಿಂ ಬಾಂಧವರು ಅಭಿಪ್ರಾಯಪಟ್ಟರು.



### ಮಾರ್ಚ್ ತಿಂಗಳಲ್ಲಿ ರಾಜ್ಯದ ವಿವಿಧೆಡೆ ಶ್ರೀ ರಂಭಾಪುರಿ ಜಗದ್ಗುರುಗಳ ಧಾರ್ಮಿಕ ಪ್ರವಾಸ

# ಧರ್ಮ ಜಾಗೃತಿ, ರಥೋತ್ಸವ, ಕಳಸಾರೋಹಣ ಸೇರಿ ಅನೇಕ ಕಾರ್ಯಕ್ರಮಗಳಲ್ಲಿ ಸಾನ್ನಿಧ್ಯ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಶ್ರೀ ರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಜಗದ್ಗುರುಗಳವರ 2026ನೇ ಸಾಲಿನ ಮಾರ್ಚ್ ತಿಂಗಳ ಧಾರ್ಮಿಕ ಪ್ರವಾಸ ಕಾರ್ಯಕ್ರಮ ಪ್ರಕಟವಾಗಿದೆ.

ಮಾರ್ಚ್ 12ರಂದು ಬೆಳಿಗ್ಗೆ ಆಳಂದ ತಾಲೂಕು ಚಲಗೇರಾದಲ್ಲಿ ಧರ್ಮ ಜಾಗೃತಿ ಸಮಾರಂಭ ನಡೆಯಲಿದ್ದು, ಸಂಜೆ ಜೇವರ್ಗಿ ತಾಲೂಕು ಶಕಾಪುರ ತಪೋವನ ಮಠದಲ್ಲಿ ಜಾತ್ರಾ ಮಹೋತ್ಸವದಲ್ಲಿ ಜಗದ್ಗುರುಗಳು ಸಾನ್ನಿಧ್ಯ ವಹಿಸಲಿದ್ದಾರೆ. ಮಾರ್ಚ್ 15ರಂದು ಅರಕೇರಾ ತಾಲೂಕಿನ ಜಾಗಟಕಲ್ಲು ಗ್ರಾಮದಲ್ಲಿ ಸಾಮೂಹಿಕ ವಿವಾಹ ಸಮಾರಂಭ ನಡೆಯಲಿದೆ.

ಮಾರ್ಚ್ 16ರಂದು ರೋಣ ತಾಲೂಕಿನ ಹಿರೇಹಾಳು ಗ್ರಾಮದಲ್ಲಿ ಹಿರೇಮಠ ಉದ್ಘಾಟನೆ ಹಾಗೂ ಸಂಜೆ ಹುಬ್ಬಳ್ಳಿಯಲ್ಲಿ ಉಣಕಲ್ಲ ಸಿದ್ಧಪ್ಪಜ್ಜನ ಮೂರ್ತಿ ಸ್ಥಾಪನಾ ಧರ್ಮ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಮಾರ್ಚ್ 17ರಂದು ಸೊರಬ ತಾಲೂಕಿನ ಶಾಂತಪುರ ಹಿರೇಮಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಹಾಗೂ ಇಷ್ಟಲಿಂಗ ಮಹಾಪೂಜಾ ನಡೆಯಲಿದ್ದು, ಸಂಜೆ ದುಗ್ಲಿಯ ಶ್ರೀ ಗುರು ರೇವಣಸಿದ್ಧೇಶ್ವರ ಮಠದ ಜಾತ್ರಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮಾರ್ಚ್ 19ರಂದು ಹುಬ್ಬಳ್ಳಿ ತಾಲೂಕಿನ ತಿರುಮಲಕೊಪ್ಪದ ಶ್ರೀ ಜಗದ್ಗುರು ರೇಣುಕ ಧರ್ಮ ನಿವಾಸದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಹಾಗೂ ರೇಣುಕಾಚಾರ್ಯ ರಥೋತ್ಸವ ನಡೆಯಲಿದೆ. ಮಾರ್ಚ್ 20ರಂದು ಧಾರವಾಡ ಜಿಲ್ಲೆಯ ಅಮ್ಮಿನಬಾವಿಯಲ್ಲಿ ಜಾತ್ರಾ ಮಹೋತ್ಸವ, 21ರಂದು ಹಾವೇರಿ ತಾಲೂಕಿನ ಕೆಸರಳ್ಳಿಯಲ್ಲಿ ಶ್ರೀ ಕಲ್ಮೇಶ್ವರ ದೇವಸ್ಥಾನದ ಕಳಸಾರೋಹಣ ಹಾಗೂ ಸಂಜೆ ಹುಬ್ಬಳ್ಳಿಯಲ್ಲಿ ರೇಣುಕಾಚಾರ್ಯ ಜಯಂತಿ ಸಮಾರಂಭ ನಡೆಯಲಿದೆ.

ಮಾರ್ಚ್ 22ರಂದು ಹಾವೇರಿ ಜಿಲ್ಲೆಯ ನೆಗಳೂರಿನಲ್ಲಿ ಇಷ್ಟಲಿಂಗ ಮಹಾಪೂಜಾ ನೆರವೇರಲಿದ್ದು, ಮಾರ್ಚ್ 23ರಿಂದ 25ರವರೆಗೆ ಬಳ್ಳಾರಿ ನಗರದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಧರ್ಮ ಸಮಾರಂಭ ನಡೆಯಲಿದೆ.

ಮಾರ್ಚ್ 26 ಮತ್ತು 27ರಂದು ರಾಣೆಬೆನ್ನೂರು ತಾಲೂಕಿನ ಲಿಂಗದಹಳ್ಳಿಯಲ್ಲಿ ಧರ್ಮ ಜಾಗೃತಿ ಸಮಾರಂಭ ನಡೆಯಲಿದ್ದು, 27ರ ಸಂಜೆ ಹೂವಿನಹಡಗಲಿ ತಾಲೂಕಿನ ಮಾನಿಹಳ್ಳಿ ಮಠದಲ್ಲಿ ಧರ್ಮ ಜಾಗೃತಿ ಕಾರ್ಯಕ್ರಮ ನಡೆಯಲಿದೆ. ಮಾರ್ಚ್ 28 ಮತ್ತು 29ರಂದು ಹುಬ್ಬಳ್ಳಿ ತಾಲೂಕಿನ ಹಳ್ಯಾಳದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ನಡೆಯಲಿದೆ.

ಮಾರ್ಚ್ 30ರಂದು ಅಜ್ಜಂಪುರ ತಾಲೂಕಿನ ಹಣ್ಣೆಮಠದಲ್ಲಿ ಪುಣ್ಯ ಸ್ಮರಣೋತ್ಸವ ಹಾಗೂ 31ರಂದು ಬ್ಯಾಡಗಿ ತಾಲೂಕಿನ ಹಂಸಭಾವಿಯಲ್ಲಿ ನವೋದಯ ಶಾಲೆಯ ರಜತ ಮಹೋತ್ಸವ ಸಮಾರಂಭದಲ್ಲಿ ಜಗದ್ಗುರುಗಳು ಸಾನ್ನಿಧ್ಯ ವಹಿಸಲಿದ್ದಾರೆ.

ಧರ್ಮಾಭಿಮಾನಿಗಳು ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಆಶೀರ್ವಾದ ಪಡೆಯಬೇಕೆಂದು ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ವಿನಂತಿಸಿದ್ದಾರೆ.

## ಇಂದು ಬೆಂಗಳೂರು ಚಲೋ ಸಿದ್ಧತಾ ಸಭೆ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರಸಭೆ ಎದುರು ಟೆಂಟ್‌ನಲ್ಲಿ ನಡೆಯುತ್ತಿರುವ 'ಬಲ್ಡೋಟ ತೊಲಗಿಸಿ' ಹೋರಾಟ 126ನೇ ದಿನಕ್ಕೆ ತಲುಪಿದೆ. ಮುಂದಿನ ಹೋರಾಟದ ರೂಪುರೇಷೆ ಕುರಿತು ಮಾ.7ರಂದು ಬೆಳಗ್ಗೆ 10 ಗಂಟೆಗೆ ನಗರದ ಮಹಾಂತಯ್ಯನಮಠ ಕಲ್ಯಾಣ ಮಂಟಪದಲ್ಲಿ 'ಬೆಂಗಳೂರು ಚಲೋ' ಸಿದ್ಧತಾ ಸಭೆ ಕರೆಯಲಾಗಿದೆ ಎಂದು ಜಂಟಿ ಕ್ರಿಯಾ ವೇದಿಕೆಯ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ನೇತೃತ್ವದಲ್ಲಿ ನಡೆದ ಧರಣಿ ಮತ್ತು ಬಂದ್ ಹೋರಾಟ ಯಶಸ್ವಿಯಾದ ಹಿನ್ನೆಲೆ ಈ ಸಭೆ ಆಯೋಜಿಸಲಾಗಿದೆ. ಬಂದ್ ಯಶಸ್ವಿಗೊಳಿಸಲು ಶ್ರಮಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸಿ ಮುಂದಿನ ಹೋರಾಟದ ಕುರಿತು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದು ಅವರು ಹೇಳಿದರು.

ಬಂದ್ ನಂತರ ಜನಪ್ರತಿನಿಧಿಗಳು ಬಾಧಿತ ಹಳ್ಳಿಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸುತ್ತಿರುವುದು ಒಳ್ಳೆಯ ಬೆಳವಣಿಗೆ. ಬಸಾಪುರ ಕೆರೆಯನ್ನು ಸಾರ್ವಜನಿಕರಿಗೆ ಮುಕ್ತಗೊಳಿಸುವ ವಿಷಯದಲ್ಲಿ ಜಿಲ್ಲಾಡಳಿತ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಅವರು ಆಗ್ರಹಿಸಿದರು.

ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ ಮಾತನಾಡಿ, ಬಜೆಟ್‌ನಲ್ಲಿ ಬಾಧಿತ ಹಳ್ಳಿಗಳ ಆರೋಗ್ಯ ಸಮಸ್ಯೆ, ಪರಿಸರ ಹಾನಿ, ಬೆಳೆ ನಷ್ಟ ಹಾಗೂ ಸಾವುಗಳ ಕುರಿತು ವಿಶೇಷ ಪ್ಯಾಕೇಜ್ ಘೋಷಿಸಬೇಕು. ಐಐಎಸ್‌ಸಿ ಮತ್ತು ಎಐಐಎಂಎಸ್ ಮೂಲಕ ಪರಿಸರ ಆರೋಗ್ಯ ಸಮೀಕ್ಷೆ ನಡೆಸಬೇಕು. ತುಂಗಭದ್ರಾ ನದಿ ಮಾಲಿನ್ಯ ನಿಯಂತ್ರಣಕ್ಕಾಗಿ ಶುದ್ಧೀಕರಣ ಯೋಜನೆ ರೂಪಿಸಿ ಅನುದಾನ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಧರಣಿಯಲ್ಲಿ ಹಿರಿಯ ಸಾಹಿತಿ ಎಚ್.ಎಸ್. ಪಾಟೀಲ್, ಎ.ಎಂ. ಮದರಿ, ಮಂಜುನಾಥ ಜಿ. ಗೊಂಡಬಾಳ, ಶರಣು ಡೊಳ್ಳಿನ, ಸರೋಜಾ ಬಾಕಳೆ, ಮೂಕಪ್ಪ ಮೇಸ್ತ್ರಿ, ಶರಣು ಗಡ್ಡಿ, ರುದ್ರಪ್ಪ ಭಂಡಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಿರಾಶಾದಾಯಕ ರಾಜ್ಯ ಬಜೆಟ್: ಉಮೇಶ ಚನ್ನು ಪಾಟೀಲ್ ಟೀಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ ರಾಜ್ಯ ಬಜೆಟ್ ಅತ್ಯಂತ ನಿರಾಶಾದಾಯಕವಾಗಿದ್ದು, ಕರ್ನಾಟಕದ ಜನತೆಯ ಆಶೋತ್ತರಗಳಿಗೆ ಸ್ಪಂದಿಸದ ಬಜೆಟ್ ಆಗಿದೆ ಎಂದು ಚನ್ನು ಪಾಟೀಲ್ ಫೌಂಡೇಶನ್ ಸಂಸ್ಥಾಪಕ ಹಾಗೂ ಬಿಜೆಪಿ ಯುವ ಮುಖಂಡ ಉಮೇಶ ಚನ್ನು ಪಾಟೀಲ್ ಅಭಿಪ್ರಾಯ ವ್ಯಕ್ತಪಡಿಸಿದರು.

ಶುಕ್ರವಾರ ಮಂಡನೆಯಾದ ಬಜೆಟ್ ಕುರಿತು ನರೇಗಲ್ಲದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಜನರು ಈ ಬಜೆಟ್‌ನಿಂದ ಹಲವು ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದರು. ಆದರೆ ಅವುಗಳಲ್ಲಿ ಬಹುತೇಕ ವಿಷಯಗಳು ಬಜೆಟ್‌ನಲ್ಲಿ ಕಾಣಿಸದಿರುವುದು ಜನರಲ್ಲಿ ನಿರಾಸೆ ಮೂಡಿಸಿದೆ ಎಂದು ಹೇಳಿದರು.

ಉತ್ತರ ಕರ್ನಾಟಕದ ಅಭಿವೃದ್ಧಿಗೆ ಯಾವುದೇ ಪ್ರತ್ಯೇಕ ಯೋಜನೆಗಳನ್ನು ಘೋಷಿಸಿಲ್ಲ. ಯುವ ಸಮೂಹಕ್ಕೆ ಸಹ ಪ್ರಾಮುಖ್ಯತೆ ನೀಡದಿರುವುದು ದುಃಖಕರವಾಗಿದೆ. ಈ ಬಜೆಟ್ ರಾಜ್ಯದ ಜನರ ಮೇಲೆ ಸಾಲದ ಹೊರೆ ಹೆಚ್ಚಿಸುವಂತಾಗಿದೆ ಎಂದು ಅವರು ಟೀಕಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 17ನೇ ಬಾರಿ ಬಜೆಟ್ ಮಂಡಿಸಿರುವ ಅನುಭವಿ ನಾಯಕರು. ಇಂತಹ ಅನುಭವ ಹೊಂದಿರುವ ನಾಯಕರಿಂದ ಜನತೆ ಉತ್ತಮ ಹಾಗೂ ಅಭಿವೃದ್ಧಿ ಪರ ಬಜೆಟ್ ನಿರೀಕ್ಷಿಸಿದ್ದರು. ಆದರೆ ಈ ಬಜೆಟ್ ಜನರ ನಿರೀಕ್ಷೆಗಳನ್ನು ಈಡೇರಿಸುವಲ್ಲಿ ವಿಫಲವಾಗಿದೆ ಎಂದು ಉಮೇಶ ಚನ್ನು ಪಾಟೀಲ್ ಹೇಳಿದರು.

ಗದಗ ಜಿಲ್ಲೆಗೆ ಸಹ ಈ ಬಜೆಟ್‌ನಲ್ಲಿ ಹೇಳಿಕೊಳ್ಳುವಂತಹ ವಿಶೇಷ ಯೋಜನೆಗಳಿಲ್ಲದಿರುವುದು ನಿರಾಶಾದಾಯಕವಾಗಿದೆ ಎಂದು ಅವರು ತಿಳಿಸಿದರು.

### ಸಿಎಂ ಸಿದ್ದರಾಮಯ್ಯ ಮಂಡಿಸಿದ 4.49 ಲಕ್ಷ ಕೋಟಿ ಬಜೆಟ್‌ಗೆ ವ್ಯಾಪಾರ ವಲಯದಿಂದ ಬೆಂಬಲ

# ಸಮಾನತೆ ಕಾಯ್ದುಕೊಂಡ ರಾಜ್ಯ ಬಜೆಟ್: ಗದಗ ಜಿಲ್ಲಾ ಚೇಂಬರ್ ಮೆಚ್ಚುಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ 2026-27ನೇ ಸಾಲಿನ ರಾಜ್ಯ ಮುಂಗಡ ಪತ್ರವು ಎಲ್ಲಾ ಕ್ಷೇತ್ರಗಳನ್ನು ಗಮನದಲ್ಲಿಟ್ಟುಕೊಂಡ ಸಮಾನತೆ ಕಾಯ್ದುಕೊಂಡ ಬಜೆಟ್ ಆಗಿದೆ ಎಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ (ಚೇಂಬರ್ ಆಫ್ ಕಾಮರ್ಸ್) ಅಭಿಪ್ರಾಯ ವ್ಯಕ್ತಪಡಿಸಿದೆ.



ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ 17ನೇ ಬಾರಿಗೆ 4.49 ಲಕ್ಷ ಕೋಟಿ ಗಾತ್ರದ ರಾಜ್ಯ ಬಜೆಟ್ ಮಂಡಿಸಿದ್ದು, ವಿತ್ತೀಯ ಕೊರತೆ 97,449 ಕೋಟಿ ಎಂದು ತಿಳಿಸಲಾಗಿದೆ. ಈ ಬಜೆಟ್‌ನಲ್ಲಿ ವಿವಿಧ ಕ್ಷೇತ್ರಗಳಿಗೆ ಸಮಾನ ಆದ್ಯತೆ ನೀಡಲಾಗಿದೆ ಎಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಹಾಗೂ ತೆರಿಗೆ ಉಪ ಸಮಿತಿ ಅಧ್ಯಕ್ಷ ವಿಜಯಕುಮಾರ ಎಸ್. ಮಾಟಲದಿನ್ನಿ ಅವರು ಹೇಳಿದ್ದಾರೆ.

ಗದಗ-ಕಪ್ಪತ್ತಗುಡ್ಡ ಹಾಗೂ ಲಕ್ಕುಂಡಿಯನ್ನು ಪ್ರವಾಸೋದ್ಯಮ ವಲಯವಾಗಿ ಅಭಿವೃದ್ಧಿಪಡಿಸುವ ನಿರ್ಧಾರ ಹಾಗೂ ಗದಗ ನಗರದಲ್ಲಿ ಹೊಸ ಬಸ್ ನಿಲ್ದಾಣ ಅಭಿವೃದ್ಧಿಗೆ ಆದ್ಯತೆ ನೀಡಿರುವುದು ಸ್ವಾಗತಾರ್ಹ ಕ್ರಮ ಎಂದು ಅವರು ತಿಳಿಸಿದ್ದಾರೆ. ಆಸ್ತಿಗಳ ಸಂಪೂರ್ಣ ಡಿಜಿಟಲೀಕರಣ, ಶೇ.4 ಬಡ್ಡಿದರದಲ್ಲಿ 10 ಲಕ್ಷ ರೂ.ವರೆಗೆ ಸಾಲ ಸೌಲಭ್ಯ, ಹುಬ್ಬಳ್ಳಿ-ಧಾರವಾಡದಲ್ಲಿ ಕೌಶಲ್ಯ ತರಬೇತಿ ಕೇಂದ್ರ ಸ್ಥಾಪನೆ ಸೇರಿದಂತೆ ಹಲವು ಯೋಜನೆಗಳನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ರೈತರಿಗಾಗಿ ಹನಿ ನೀರಾವರಿ ಯೋಜನೆ, ಯಂತ್ರೋಪಕರಣ ವಿತರಣೆ, ರೈತ ಸಂಜೀವಿನಿ ಕೇಂದ್ರಗಳ ಸ್ಥಾಪನೆ, ಕೃಷಿ ಅಭಿವೃದ್ಧಿ ಯೋಜನೆಗಳ ಜಾರಿ, ವಿಜಯಪುರದಲ್ಲಿ 12 ಸಾವಿರ ಸಾಮರ್ಥ್ಯದ ಕೋಲ್ಡ್ ಸ್ಟೋರೇಜ್ ನಿರ್ಮಾಣ ಸೇರಿದಂತೆ ಕೃಷಿ ವಲಯಕ್ಕೂ ವಿಶೇಷ ಆದ್ಯತೆ ನೀಡಲಾಗಿದೆ. ಅದೇ ರೀತಿ ರಸ್ತೆ ಅಭಿವೃದ್ಧಿ, ಮೆಟ್ರೋ ಮಾರ್ಗ ವಿಸ್ತರಣೆ, ಕೆ.ಆರ್.ಪುರಂದಿಂದ ಮೈಸೂರುವರೆಗೆ ಸುರಂಗ ಮಾರ್ಗ ನಿರ್ಮಾಣ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಿಗೂ ಅನೇಕ ಯೋಜನೆಗಳನ್ನು ಘೋಷಿಸಲಾಗಿದೆ.

ಮುನಿರಾಬಾದ್ ಟಿ.ಬಿ. ಡ್ಯಾಂ ಸಮೀಪ ಕ್ಯಾನ್ಸರ್ ಆಸ್ಪತ್ರೆ ಸ್ಥಾಪನೆ, ಶಾಲೆ-ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಭರ್ತಿ, ಅಂಗನವಾಡಿ ಕಾರ್ಯಕರ್ತೆಯರಿಗೆ ಹೆಚ್ಚಿನ ಸೌಲಭ್ಯ, ಬೆಂಗಳೂರು ನಗರದಲ್ಲಿ ಸ್ತನ ಕ್ಯಾನ್ಸರ್ ಕೇಂದ್ರ ಸ್ಥಾಪನೆ ಸೇರಿದಂತೆ ಹಲವು ಸಾಮಾಜಿಕ ಯೋಜನೆಗಳಿಗೂ ಆದ್ಯತೆ ನೀಡಲಾಗಿದೆ.

ಒಟ್ಟಾರೆ ಈ ಬಜೆಟ್‌ನಲ್ಲಿ ಕೃಷಿ, ಆರೋಗ್ಯ, ಸಾರಿಗೆ, ಶಿಕ್ಷಣ ಹಾಗೂ ಪಂಚ ಗ್ಯಾರಂಟಿ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಿರುವುದು ಗಮನಾರ್ಹವಾಗಿದೆ ಎಂದು ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು ಹಾಗೂ ತೆರಿಗೆ ಸಲಹೆಗಾರರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

#### ಬಜೆಟ್‌ನ ಪ್ರಮುಖ ಅಂಶಗಳು

- 4.49 ಲಕ್ಷ ಕೋಟಿ ಗಾತ್ರದ ರಾಜ್ಯ ಬಜೆಟ್
- 97,449 ಕೋಟಿ ವಿತ್ತೀಯ ಕೊರತೆ
- ಗದಗ-ಕಪ್ಪತ್ತಗುಡ್ಡ, ಲಕ್ಕುಂಡಿ ಪ್ರವಾಸೋದ್ಯಮ ಅಭಿವೃದ್ಧಿ
- ರೈತರಿಗೆ ಹನಿ ನೀರಾವರಿ ಯೋಜನೆ, ಯಂತ್ರೋಪಕರಣ ವಿತರಣೆ
- ವಿಜಯಪುರದಲ್ಲಿ 12 ಸಾವಿರ ಸಾಮರ್ಥ್ಯದ ಕೋಲ್ಡ್ ಸ್ಟೋರೇಜ್
- 158 ಕಿ.ಮೀ ರಸ್ತೆ ಅಭಿವೃದ್ಧಿ, 41 ಕಿ.ಮೀ ಮೆಟ್ರೋ ಮಾರ್ಗ
- ಕೆ.ಆರ್.ಪುರಂ-ಮೈಸೂರ ನಡುವೆ ಸುರಂಗ ಮಾರ್ಗ ಯೋಜನೆ
- ಆರೋಗ್ಯ, ಶಿಕ್ಷಣ ಹಾಗೂ ಪಂಚ ಗ್ಯಾರಂಟಿ ಯೋಜನೆಗಳಿಗೆ ಆದ್ಯತೆ

# ಬಸ್ ನಿಲುಗಡೆಗೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ಬಸ್ ನಿಲ್ದಾಣದಲ್ಲಿ ಬಸ್ ನಿಲುಗಡೆ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ವಿದ್ಯಾರ್ಥಿಗಳು ಶುಕ್ರವಾರ ಕೆಲಕಾಲ ಪ್ರತಿಭಟನೆ ನಡೆಸಿದ ಘಟನೆ ನಡೆದಿದೆ. ಬಳಿಕ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಸ್ಥಿತಿ ತಿಳಿಗೊಳಿಸಿದ ನಂತರ ಸಾರಿಗೆ ಅಧಿಕಾರಿಗಳಿಂದ ಲಿಖಿತ ಭರವಸೆ ನೀಡಲಾಗಿದ್ದು, ವಿದ್ಯಾರ್ಥಿಗಳು ಪ್ರತಿಭಟನೆ ಕೈಬಿಟ್ಟರು.

ಪಟ್ಟಣದ ಜ. ಫಕೀರೇಶ್ವರ ಪ್ರಥಮ ದರ್ಜೆ ಕಾಲೇಜು ಸಮೀಪ ಬಸ್‌ಗಳು ನಿಲುಗಡೆ ಮಾಡದೇ ಇರುವುದರಿಂದ ವಿದ್ಯಾರ್ಥಿಗಳಿಗೆ ಸಕಾಲಕ್ಕೆ ತರಗತಿಗಳಿಗೆ ಹಾಜರಾಗಲು ತೊಂದರೆ ಆಗುತ್ತಿದೆ. ಈ ಕುರಿತು ಹಲವು ಬಾರಿ ಮೌಖಿಕವಾಗಿ ಹಾಗೂ ಲಿಖಿತವಾಗಿ ಎಬಿವಿಪಿ ವತಿಯಿಂದ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು.

ಬಸ್ ಚಾಲಕರು ವಿದ್ಯಾರ್ಥಿಗಳೊಂದಿಗೆ ಅನುಚಿತವಾಗಿ ವರ್ತಿಸುತ್ತಿದ್ದಾರೆ ಎಂಬ ಆರೋಪವೂ ಕೇಳಿ ಬಂದಿದ್ದು, ಈ ಹಿನ್ನೆಲೆಯಲ್ಲಿ ಜಿಲ್ಲಾ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಸಮಸ್ಯೆ ಪರಿಹರಿಸಬೇಕು ಎಂದು ವಿದ್ಯಾರ್ಥಿಗಳು ಧಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು. ಕೆಲಕಾಲ ಬೇರೆ ಸ್ಥಳಗಳಿಗೆ ತೆರಳುತ್ತಿದ್ದ ಬಸ್‌ಗಳನ್ನು ಸಹ ತಡೆದು ನಿಲ್ಲಿಸಿದ ವಿದ್ಯಾರ್ಥಿಗಳಿಗೆ ಸಾರ್ವಜನಿಕರು ಬೆಂಬಲ ನೀಡಿದರು.

ಸುದ್ದಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಶಾಂತಗೊಳಿಸಿದರು. ನಂತರ ಸಾರಿಗೆ ಇಲಾಖೆಯ ಅಧಿಕಾರಿಗಳು ವಿದ್ಯಾರ್ಥಿಗಳೊಂದಿಗೆ ಚರ್ಚೆ ನಡೆಸಿ ಸಮಸ್ಯೆ ಕುರಿತು ಲಿಖಿತವಾಗಿ ಉತ್ತರ ನೀಡಿದ ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆ ಹಿಂತೆಗೆದುಕೊಂಡರು.

# ಸಿದ್ದರಾಮಯ್ಯ ಬಜೆಟ್ ಅಭಿವೃದ್ಧಿಗೆ ಪೂರಕವಲ್ಲ: ಚಂದ್ರಶೇಖರ್ ಹರಿಜನ

■ ವಿಜಯಸಾಕ್ಷಿ ಸುದ್ದಿ, ಗದಗ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ 17ನೇ ಆಯವ್ಯಯ ಮಂಡಿಸಿರುವುದು ಸಂತೋಷದ ಸಂಗತಿಯೇ. ಆದರೆ ಇಷ್ಟು ದೀರ್ಘ ಅವಧಿ ಹಣಕಾಸು ಸಚಿವರಾಗಿ ಹಾಗೂ ಮುಖ್ಯಮಂತ್ರಿಗಳಾಗಿ ಪಡೆದಿರುವ ಅನುಭವ ರಾಜ್ಯದ ಜನರ ಹಿತ ಕಾಪಾಡುವಲ್ಲಿ ವಿಫಲವಾಗಿದೆ ಎಂಬುದು ಕನ್ನಡಿಗರ ದುರ್ದೈವ ಎಂದು ಬಿಜೆಪಿ ಯುವ ಮುಖಂಡ ಚಂದ್ರಶೇಖರ್ ಹರಿಜನ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಶುಕ್ರವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಿದ್ದರಾಮಯ್ಯನವರು ಮಂಡಿಸಿರುವ 17ನೇ ಬಜೆಟ್ ಕರ್ನಾಟಕವನ್ನು ಅಭಿವೃದ್ಧಿಯ ಹಾದಿಯಿಂದ ಮತ್ತಷ್ಟು ದೂರಕ್ಕೆ ತಳ್ಳುವಂತಾಗಿದೆ ಎಂದು ಹೇಳಿದ್ದಾರೆ. ದಾಖಲೆಯ ಈ ಬಜೆಟ್ ರಾಜ್ಯದ ಪ್ರತಿಯೊಬ್ಬ ನಾಗರಿಕನನ್ನೂ ಸಾಲದ ಸುಳಿಗೆ ಸಿಲುಕಿಸುವ ಕರಾಳ ಅಧ್ಯಾಯವಾಗಿದೆ. ಗ್ಯಾರಂಟಿ ಯೋಜನೆಗಳಿಗಾಗಿ ಇತರ ಇಲಾಖೆಗಳ ಅನುದಾನ ಕಡಿತಗೊಳಿಸಿರುವುದು ವಿಪರ್ಯಾಸ ಎಂದು ಟೀಕಿಸಿದ್ದಾರೆ. ಅದರಂತೆ, ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳಲ್ಲೊಂದಾದ 'ಯುವನಿಧಿ' ಯೋಜನೆಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಸಮರ್ಪಕ ಹಣ ಮೀಸಲಿಡದಿರುವುದು ನಿರುದ್ಯೋಗಿ ಯುವಕರ ಮೇಲಿನ ಸರ್ಕಾರದ ಕಾಳಜಿಯ ಕೊರತೆಯನ್ನು ತೋರಿಸುತ್ತದೆ ಎಂದು ತಿಳಿಸಿದ್ದಾರೆ. ರಾಜ್ಯದ ಯುವಕರು ನಿರುದ್ಯೋಗದಿಂದ ಸಂಕಷ್ಟಕ್ಕೆ ಸಿಲುಕುತ್ತಿದ್ದು, ಬಜೆಟ್‌ನಲ್ಲಿ ನೀಡಿದ ಭರವಸೆಯಂತೆ ಖಾಲಿ ಹುದ್ದೆಗಳ ಭರ್ತಿಗೆ ತುರ್ತಾಗಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ 44,632 ಕೋಟಿ ರೂ. ಮೀಸಲಿಟ್ಟಿದ್ದೇವೆ ಎಂದು ಹೇಳಿಕೊಳ್ಳುವ ಸರ್ಕಾರ, ದಲಿತರ ಕಾಲೋನಿಗಳ ಅಭಿವೃದ್ಧಿ ಹಾಗೂ ಮೂಲಸೌಕರ್ಯಕ್ಕೆ ಕೇವಲ 1,332 ಕೋಟಿ ರೂ. ಮಾತ್ರ ನೀಡಿರುವುದು ಅನ್ಯಾಯವಾಗಿದೆ ಎಂದು ಹೇಳಿದ್ದಾರೆ. ದಲಿತರ ಅಭಿವೃದ್ಧಿಯ ಹೆಸರಿನಲ್ಲಿ ಬಜೆಟ್ ಗಾತ್ರ ಹೆಚ್ಚಿಸಿಕೊಂಡು, ವಾಸ್ತವದಲ್ಲಿ ಆ ಹಣವನ್ನು ಗ್ಯಾರಂಟಿ ಯೋಜನೆಗಳ ಸಾಲ ತೀರಿಸಲು ಬಳಸಲಾಗುತ್ತಿದೆ. ಇದು ದಲಿತರಿಗೆ ನೀಡಿದ ಭಾಗ್ಯವಲ್ಲ, ಅವರ ಭವಿಷ್ಯಕ್ಕೆ ಮಾಡಿರುವ ದ್ರೋಹವಾಗಿದೆ ಎಂದು ಆರೋಪಿಸಿದ್ದಾರೆ. ಪ್ರಸಕ್ತ ಸಾಲಿನಲ್ಲಾದರೂ ದಲಿತರ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಅನುದಾನವನ್ನು ಕಾಲೋನಿಗಳ ಶ್ರೇಯೋಭಿವೃದ್ಧಿಗೆ ಬಳಸಬೇಕು ಎಂದು ಒತ್ತಾಯಿಸಿದರು. ಒಟ್ಟಿನಲ್ಲಿ ಸಿದ್ದರಾಮಯ್ಯನವರ ದಾಖಲೆಯ ಬಜೆಟ್ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿಲ್ಲ. ಕಳೆದ ಮೂರು ವರ್ಷಗಳಲ್ಲಿ ಕಾಣದ ಅಭಿವೃದ್ಧಿ ಈ ವರ್ಷದಲ್ಲೂ ಕಾಣುವುದಿಲ್ಲವೆಂಬ ಆತಂಕ ವ್ಯಕ್ತವಾಗುತ್ತಿದೆ. ಆದ್ದರಿಂದ ಇದು ಪ್ರಗತಿಪರ ಬಜೆಟ್ ಅಲ್ಲ, ಕರ್ನಾಟಕದ ಪಾಲಿಗೆ ಮತ್ತೊಂದು ಪೊಳ್ಳು ಭರವಸೆಯ ಆಯವ್ಯಯವಾಗಿದೆ ಎಂದು ಚಂದ್ರಶೇಖರ್ ಹರಿಜನ ಹೇಳಿದ್ದಾರೆ.

# ಅಭಿವೃದ್ಧಿ ಶೂನ್ಯ, ಸಾಲದ ಗ್ಯಾರಂಟಿ ಕಳಪೆ ಬಜೆಟ್

▶▶ ಮೊದಲನೇ ಪುಟದಿಂದ

ಇದರಿಂದ ರಾಜ್ಯದ ಆರ್ಥಿಕ ಸ್ಥಿತಿ ಡೋಲಾಯಮಾನವಾಗಿದೆ ಎಂದು ಅವರು ತಿಳಿಸಿದರು. ಈ ವರ್ಷ ಕಾಂಗ್ರೆಸ್ ಸರ್ಕಾರ ಸುಮಾರು 1.32 ಲಕ್ಷ ಕೋಟಿ ಸಾಲ ಮಾಡುತ್ತಿದೆ. ಆದರೆ ಆ ಸಾಲದ ಬಹುದೊಡ್ಡ ಭಾಗವನ್ನು ಆಸ್ತಿ ಸೃಷ್ಟಿಗೆ ಬಳಸದೇ ದಿನನಿತ್ಯದ ಆಡಳಿತ ವೆಚ್ಚ ಹಾಗೂ ಅವೈಜ್ಞಾನಿಕ ಗ್ಯಾರಂಟಿ ಯೋಜನೆಗಳ ನಿರ್ವಹಣೆಗೆ ಬಳಸುತ್ತಿದೆ ಎಂದು ಆರೋಪಿಸಿದರು. ರಾಜ್ಯದ ಒಟ್ಟು ಸಾಲ ಈಗಾಗಲೇ 8 ಲಕ್ಷ ಕೋಟಿ ಗಡಿ ದಾಟಿದ್ದು, ಸರ್ಕಾರದ ದುರಾಡಳಿತದಿಂದ 22,957 ಕೋಟಿ ರಾಜಸ್ವ ಕೊರತೆ ಉಂಟಾಗಿದೆ. ವಿತ್ತೀಯ ಕೊರತೆ ಸಹ 1 ಲಕ್ಷ ಕೋಟಿ ಆಸುಪಾಸಿಗೆ ತಲುಪಿದೆ ಎಂದು ಹೇಳಿದರು.

ಸಾಲವನ್ನೇ ಸಾಧನೆ ಎಂದು ಹೇಳಿಕೊಳ್ಳುತ್ತಿರುವ ಈ ಅಭಿವೃದ್ಧಿ ಶೂನ್ಯ ಮತ್ತು ಜನವಿರೋಧಿ ಸರ್ಕಾರಕ್ಕೆ ಜನತೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ವಸಂತ ಪಡಗದ ಹೇಳಿದರು.

# Karnataka Budget 2026| ಗೃಹಲಕ್ಷ್ಮಿ ಯೋಜನೆಗೆ 28,608 ಕೋಟಿ ರೂ. ಮೀಸಲು; ದೇವದಾಸಿ-ಲಿಂಗತ್ವ ಅಲ್ಪಸಂಖ್ಯಾತರ ಸ್ಥಿತಿಗತಿ ಅರಿಯಲು ಸಮೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

2026-27 ಸಾಲಿನ ಆಯವ್ಯಯ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸಾಕಷ್ಟು ಅನುದಾನ ಘೋಷಣೆ ಮಾಡಿದ್ದಾರೆ. ಗೃಹಲಕ್ಷ್ಮಿ ಯೋಜನೆಗೆ 28,608 ಕೋಟಿ ರೂ. ಮೀಸಲಿಡಲಾಗಿದ್ದು, ಮಾಜಿ ದೇವದಾಸಿ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಸ್ಥಿತಿಗತಿ ಅರಿಯಲು ಸಮೀಕ್ಷೆ ನಡೆಸಲಾಗುವುದು ಎಂದು ಹೇಳಿದ್ದಾರೆ.

"ಗೃಹಲಕ್ಷ್ಮಿ ಯೋಜನೆಯಡಿ ಇಲ್ಲಿಯವರೆಗೂ ಎಲ್ಲಾ ಅರ್ಹ ಫಲಾನುಭವಿಗಳಿಗೆ ಒಟ್ಟು 62,345ಕೋಟಿ ರೂ.ಗಳ ವೆಚ್ಚ ಭರಿಸಲಾಗಿದೆ.

# ಸತತ 32 ವರ್ಷ ಶೇ.100 ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ಕೆ.ಜಿ. ಮುದಗಲ್ಲ ಪ್ರೌಢಶಾಲೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಸತತ 32 ವರ್ಷಗಳಿಂದ ನೂರಕ್ಕೆ ನೂರು ಫಲಿತಾಂಶ ಸಾಧಿಸಿ ರಾಜ್ಯದಲ್ಲಿಯೇ ಮಾದರಿ ಶಾಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಈ ಹಿನ್ನೆಲೆಯಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಎಲ್. ಎಸ್. ಅರಳಹಳ್ಳಿ ಅವರನ್ನು ಗದಗದಲ್ಲಿ ಸನ್ಮಾನಿಸಲಾಯಿತು.

ಗದಗ ನಗರದ ಅಂಬೇಡ್ಕರ್ ಭವನದಲ್ಲಿ ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಸಂಯುಕ್ತ ಆಶ್ರಯದಲ್ಲಿ ಬುಧವಾರ ಆಯೋಜಿಸಿದ್ದ ಶೈಕ್ಷಣಿಕ ಸಮಾವೇಶದಲ್ಲಿ ನೂರಕ್ಕೆ ನೂರು ಫಲಿತಾಂಶ ಪಡೆದ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸನ್ಮಾನ ಸಮಾರಂಭ ನಡೆಯಿತು.

ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಪರಮಪೂಜ್ಯ ಭೈರನಹಟ್ಟಿ ಶಾಂತಲಿಂಗ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಧಾರವಾಡದ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಗದಗ ಜಿಲ್ಲಾ ಉಪನಿರ್ದೇಶಕ ಆರ್.ಎಸ್. ಬುರಡಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಬಿಇಓ ಎಚ್.ಎನ್. ನಾಯಕ್, ಎಚ್.ಬಿ. ರಡ್ಡೇರ, ವಿ.ಸಿ. ಬೆಂಡಿಗೇರಿ, ಟಿ.ಎಸ್. ಹೂಗಾರ, ವಿ.ಎ. ಪಾಟೀಲ, ಮಂಜುಳಾ ಗುಡಿಮನಿ, ಲಕ್ಷ್ಮೀ ರಿತ್ತಿ, ಎಂ.ಬಿ. ಕಲ್ಲೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜನಪರ ಮತ್ತು ಅಭಿವೃದ್ಧಿಗೆ ಪೂರಕ ಬಜೆಟ್

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 17ನೇ ದಾಖಲೆಯ ರಾಜ್ಯ ಬಜೆಟ್ ಜನಪರ ಮತ್ತು ಅಭಿವೃದ್ಧಿಗೆ ಪೂರಕವಾಗಿದೆ ಎಂದು ಹಾವೇರಿ ಲೋಕಸಭಾ ಕ್ಷೇತ್ರದ ಯುವ ಮುಖಂಡ ಆನಂದಸ್ವಾಮಿ ಗಡ್ಡದ್ದೇವರಮಠ ತಿಳಿಸಿದ್ದಾರೆ.

ಬಜೆಟ್ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳನ್ನು ಸಮತೋಲನವಾಗಿ ಗಮನದಲ್ಲಿಟ್ಟುಕೊಂಡು ಈ ಬಜೆಟ್ ಮಂಡಿಸಲಾಗಿದೆ ಎಂದು ಹೇಳಿದರು. ರಾಜ್ಯದ ಸಮಗ್ರ ಅಭಿವೃದ್ಧಿ ಮತ್ತು ಜನಕಲ್ಯಾಣವನ್ನು ಮುಖ್ಯವಾಗಿಟ್ಟುಕೊಂಡು ರೂಪಿಸಲಾದ ಈ ಬಜೆಟ್ ರಾಜ್ಯದ ಇತಿಹಾಸದಲ್ಲಿಯೇ ಅತ್ಯುತ್ತಮ ಬಜೆಟ್‌ಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯಪಟ್ಟರು.

ರಾಜ್ಯದ ಜನರ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಅಭಿವೃದ್ಧಿಗೆ ಪೂರಕವಾದ ಹಲವು ಯೋಜನೆಗಳನ್ನು ಒಳಗೊಂಡಿರುವುದು ಈ ಬಜೆಟ್‌ನ ವಿಶೇಷತೆ. ಸಮಾಜದ ವಿವಿಧ ವರ್ಗಗಳ ಅಭಿವೃದ್ಧಿಗೆ ಆದ್ಯತೆ ನೀಡಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು.

# ನಿಧನ

## ಚಂದ್ರಶೇಖರಪ್ಪ ನಾಯ್ಕರ



**ಮುಳಗುಂದ:** ಪಟ್ಟಣ ಸಮೀಪದ ಕುರ್ತಕೋಟಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನಿರ್ದೇಶಕ ಚಂದ್ರಶೇಖರಪ್ಪ ನಾಯ್ಕರ (70) ಅವರು ಮಾರ್ಚ್ 4, 2026 ರಂದು ಬುಧವಾರ ನಿಧನರಾದರು. ಮೃತರಿಗೆ ಪತ್ನಿ, ಒಬ್ಬ ಪುತ್ರ, ಮೂವರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವಿದೆ.

ಸಹಕಾರಿ ಕ್ಷೇತ್ರದಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸಿದ್ದ ಚಂದ್ರಶೇಖರಪ್ಪ ನಾಯ್ಕರ ಅವರ ನಿಧನಕ್ಕೆ ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ.

# ನೆರೆಯ ಜಿಲ್ಲೆಗಳಿಗೆ ಬಂಪರ್, ಗದಗಕ್ಕೆ ನಿರಾಸೆ

▶▶ ಮೊದಲನೇ ಪುಟದಿಂದ

ಹೊನ್ನಾಳಿ ಹಾಗೂ ಗದಗ ನಗರದಲ್ಲಿ ನೂತನ ಬಸ್ ನಿಲ್ದಾಣಗಳನ್ನು ಘೋಷಿಸಲಾಗಿದೆ. ಗದಗ ನಗರದಲ್ಲಿ ಈಗಾಗಲೇ ಕೇಂದ್ರ ಬಸ್ ನಿಲ್ದಾಣ ಹಾಗೂ ಪಂ. ಪುಟ್ಟರಾಜ ಕವಿ ಗವಾಯಿಗಳ ಹೆಸರಿನ ಬಸ್ ನಿಲ್ದಾಣಗಳಿರುವುದರಿಂದ ಮತ್ತೊಂದು ಬಸ್ ನಿಲ್ದಾಣ ಘೋಷಣೆ ಅಚ್ಚರಿ ಮೂಡಿಸಿದೆ.

ಇನ್ನು 2026-27ನೇ ಸಾಲಿನಲ್ಲಿ ಪೂರ್ಣಗೊಳ್ಳುವ ಯೋಜನೆಗಳ ಪೈಕಿ ಶಿರಹಟ್ಟಿ ಕೆರೆ ತುಂಬಿಸುವ ಯೋಜನೆಗೆ ಅನುಮೋದನೆ ದೊರೆತಿದೆ. ಅದೇ ರೀತಿ ರೋಣ ತಾಲೂಕಿನ ಕೆರೆಗಳನ್ನು ತುಂಬಿಸುವ ಕಾಮಗಾರಿ ಹಾಗೂ ಮಲಪ್ರಭಾ ಯೋಜನೆಯಡಿ ರೋಣ ಕ್ಷೇತ್ರದಲ್ಲಿ ಕಾಲುವೆಗಳ ಆಧುನೀಕರಣಕ್ಕೂ ಹಸಿರು ನಿಶಾನೆ ಸಿಕ್ಕಿದೆ.

**ವಸತಿ ಶಾಲೆಗಳ ಆರಂಭ :** ಗದಗ ಹಾಗೂ ರೋಣ ತಾಲೂಕುಗಳಲ್ಲಿ ಕಾರ್ಮಿಕ ಇಲಾಖೆ ವ್ಯಾಪ್ತಿಯ ಹಂತ 1 ಮತ್ತು 2ರಲ್ಲಿ ಅನುಮೋದನೆ ಪಡೆದಿರುವ ಶ್ರಮಿಕ ವಸತಿ ಶಾಲೆಗಳನ್ನು ಆರಂಭಿಸಲು ಉದ್ದೇಶಿಸಲಾಗಿದೆ.

ಇನ್ನು ಗದಗ ಜಿಲ್ಲೆಗೆ ನೇರ ಸಂಬಂಧವಿಲ್ಲದ ಗದಗ-ವಾಡಿ ರೈಲ್ವೆ ಮಾರ್ಗದ ಭೂಸ್ವಾಧೀನದ ಸಂಪೂರ್ಣ ವೆಚ್ಚ ಹಾಗೂ ನಿರ್ಮಾಣ ವೆಚ್ಚದ ಶೇ.50 ಅನ್ನು ರಾಜ್ಯ ಸರ್ಕಾರವೇ ಭರಿಸುವುದಾಗಿ ಘೋಷಿಸಿರುವುದಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

**ಹೊಸ ನಿರೀಕ್ಷೆ ಮೂಡಿಸಿದ ಘೋಷಣೆ :** ನಬಾರ್ಡ್ ಸಲಹೆಯಂತೆ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಸಹಕಾರ ಬ್ಯಾಂಕ್ ಸ್ಥಾಪಿಸಲು ಆರ್‌ಬಿಐಗೆ ಪ್ರಸ್ತಾವನೆ ಸಲ್ಲಿಸುವ ನಿರ್ಧಾರ ಕೈಗೊಳ್ಳಲಾಗಿದೆ. ಜೊತೆಗೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿನ ಏತ ನೀರಾವರಿ, ಚೆಕ್ ಡ್ಯಾಂ ಹಾಗೂ ಕೆರೆಗಳ ಪುನಶ್ಚೇತನ ಅಭಿವೃದ್ಧಿಗೆ 1793 ಕೋಟಿ ರೂ. ವೆಚ್ಚದಲ್ಲಿ 112 ಕಾಮಗಾರಿಗಳನ್ನು ಕೈಗೊಳ್ಳುವ ಘೋಷಣೆ ಜಿಲ್ಲೆಯ ರೈತರಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ.

**ಆಶಾದಾಯಕ ಅಂಶಗಳು :** ಜಿಲ್ಲೆಗೆ ಪ್ರತ್ಯೇಕ ಯೋಜನೆಗಳಿಲ್ಲದಿದ್ದರೂ 56,432 ಹುದ್ದೆಗಳ ಭರ್ತಿಗೆ ಸರ್ಕಾರ ತೀರ್ಮಾನಿಸಿರುವುದು ಹಾಗೂ ಒಂದು ಬಾರಿಗೆ ಅನ್ವಯವಾಗುವಂತೆ ಐದು ವರ್ಷ ವಯೋಮಿತಿ ಸಡಿಲಿಕೆ ಮಾಡಿರುವುದು ನಿರುದ್ಯೋಗಿ ಪದವೀಧರರಲ್ಲಿ ಭರವಸೆ ಮೂಡಿಸಿದೆ.

ಪ್ರತಿ ಜಿಲ್ಲೆಯಲ್ಲಿ ಮೆಟ್ರಿಕ್ ನಂತರದ ಬಾಲಕರು ಮತ್ತು ಬಾಲಕಿಯರ ವಸತಿ ನಿಲಯ ಸ್ಥಾಪನೆ, ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮಕ್ಕೆ 8600 ಕೋಟಿ ರೂ. ಮೀಸಲು, ಕೃಷಿ ವಿಸ್ತಾರ ಯೋಜನೆ, ಸಸ್ಯ ಸಂಜೀವಿನಿ ಹಾಗೂ ರೈತ ಕರೆ ಕೇಂದ್ರ ಸ್ಥಾಪನೆ ಕುರಿತ ಘೋಷಣೆಗಳನ್ನು ರೈತ ಸಮುದಾಯ ಸ್ವಾಗತಿಸಿದೆ.

# ಗುರಿಯೇ ಇಲ್ಲದ ಬಜೆಟ್: ಗೋವಿಂದಗೌಡ್ರ ಟೀಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್ ಮಂಡಿಸಿ ದಾಖಲೆ ಮಾಡಿರಬಹುದು, ಆದರೆ ಈ ಬಜೆಟ್‌ನಲ್ಲಿ ದಾಖಲೆಯಾಗುವಂತಹ ಯಾವುದೇ ಮಹತ್ವದ ಅಂಶಗಳಿಲ್ಲ ಎಂದು ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಟೀಕಿಸಿದ್ದಾರೆ.


ಬಜೆಟ್‌ನಲ್ಲಿ ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ಕೆಲ ವರ್ಗಗಳ ಓಲೈಕೆ ಮಾತ್ರ ಕಾಣಿಸುತ್ತಿದೆ. ಬಜೆಟ್ ಎಂದರೆ ಅಭಿವೃದ್ಧಿ ಪರವಾಗಿರಬೇಕು. ಆದರೆ ಈ ಬಜೆಟ್‌ಗೆ ಯಾವುದೇ ಸ್ಪಷ್ಟ ಗುರಿ ಇಲ್ಲದಿರುವುದು ವಿಷಾದನೀಯವಾಗಿದೆ ಎಂದು ಅವರು ಹೇಳಿದ್ದಾರೆ.

ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಸುಳ್ಳು ಹೇಳಿ ಅಧಿಕಾರಕ್ಕೆ ಬಂದ ಬಳಿಕ, ನುಡಿದಂತೆ ನಡೆದುಕೊಂಡಿದ್ದೇವೆ ಎಂದು ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಜಾಹೀರಾತು ನೀಡಿರುವುದೇ ಸರ್ಕಾರದ ಸಾಧನೆಯಾಗಿದೆ. ಆದರೆ ಈ ಗ್ಯಾರಂಟಿಗಳ ಗುರಿ ಜನರಿಗೆ ತಲುಪಿಲ್ಲ ಎಂದು ಅವರು ಆರೋಪಿಸಿದ್ದಾರೆ.

ಐದು ಗ್ಯಾರಂಟಿಗಳು ನಮ್ಮ ಶಕ್ತಿ ಎಂದು ಹೇಳುತ್ತಿದ್ದ ಮುಖ್ಯಮಂತ್ರಿಗಳು ಯುವನಿಧಿಗೆ ಬಜೆಟ್‌ನಲ್ಲಿ ನಯಾಪೈಸೆಯನ್ನೂ ಮೀಸಲಿಡದಿರುವುದು ಯುವ ಪೀಳಿಗೆಯ ಬಗ್ಗೆ ಸರ್ಕಾರದ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಗೋವಿಂದಗೌಡ್ರ ಹೇಳಿದ್ದಾರೆ. ಇದೇ ಪರಿಸ್ಥಿತಿ ಮುಂದುವರೆದರೆ ಧಾರವಾಡದಲ್ಲಿ ನಡೆದಂತೆ ರಾಜ್ಯಾದ್ಯಂತ ಯುವಕರು ದಂಗೆ ಏಳುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ. ಅಭಿವೃದ್ಧಿಗೆ ಹೊಸ ಯೋಜನೆಗಳು ಹಾಗೂ ಉದ್ಯೋಗ ಸೃಷ್ಟಿಗೆ ಯಾವುದೇ ಯೋಜನೆಗಳನ್ನು ಈ ಬಜೆಟ್‌ನಲ್ಲಿ ಘೋಷಿಸದಿರುವುದು ನಿರಾಶಾದಾಯಕವಾಗಿದೆ. ಒಟ್ಟಾರೆ ಇದು ಗುರಿಯೇ ಇಲ್ಲದ ಬಜೆಟ್ ಎಂದು ಅವರು ಟೀಕಿಸಿದ್ದಾರೆ.

## ಸಚಿವ ಡಾ. ಎಚ್.ಕೆ. ಪಾಟೀಲರ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಮಾರ್ಚ್ 7 ಮತ್ತು 8 ರಂದು ಗದಗ ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಪ್ರವಾಸ ಕೈಗೊಳ್ಳಲಿದ್ದಾರೆ.

ಮಾರ್ಚ್ 7ರಂದು ಬೆಳಿಗ್ಗೆ 9.30ಕ್ಕೆ ಹುಬ್ಬಳ್ಳಿಯಿಂದ ರಸ್ತೆ ಮಾರ್ಗವಾಗಿ ಗದಗಕ್ಕೆ ಆಗಮಿಸಲಿದ್ದು, ನಂತರ ಜಿಲ್ಲೆಯ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಗದಗದಲ್ಲೇ ವಾಸ್ತವ್ಯ ಮಾಡಲಿದ್ದಾರೆ.

ಮಾರ್ಚ್ 8ರಂದು ಬೆಳಿಗ್ಗೆ 11 ಗಂಟೆಗೆ ಗದಗ ತಾಲೂಕಿನ ತಿಮ್ಮಾಪುರ ಗ್ರಾಮದಲ್ಲಿ ಗದಗ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಆಯೋಜಿಸಲಾದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಬಳಿಕ ರಾತ್ರಿ 8.30ಕ್ಕೆ ಗದಗದಿಂದ ರಸ್ತೆ ಮಾರ್ಗವಾಗಿ ಹುಬ್ಬಳ್ಳಿಗೆ ತೆರಳಿ, ಅಲ್ಲಿಂದ ರೈಲು ಮಾರ್ಗವಾಗಿ ಬೆಂಗಳೂರಿಗೆ ಪ್ರಯಾಣಿಸಲಿದ್ದಾರೆ ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

**9 ವರ್ಷಗಳಾದರೂ ಪ್ಲಾಟ್ ಗುರುತಿಸದ ಆರೋಪ * 448 ಫಲಾನುಭವಿಗಳ ಬೇಡಿಕೆ * ಮೂಲಭೂತ ಸೌಲಭ್ಯ ಒದಗಿಸಲು ಅಧಿಕಾರಿಗಳಿಗೆ ಸೂಚನೆ**

# ಆಶ್ರಯ ನಿವೇಶನಕ್ಕಾಗಿ ಎಸಿ ಕಾಲಿಗೆರಗಿ ಕೈಮುಗಿದು ಬೇಡಿದ ಫಲಾನುಭವಿಗಳು!





"ಸುಮಾರು 9 ವರ್ಷಗಳ ಹಿಂದೆ ಆಶ್ರಯ ನಿವೇಶನದ ಹಕ್ಕುಪತ್ರ ನೀಡಿದರೂ ಇದುವರೆಗೂ ಪ್ಲಾಟ್ ಗುರುತಿಸಿಕೊಡಲಾಗಿಲ್ಲ. ನಾವು ತೆರಿಗೆ ಕಟ್ಟುತ್ತಾ ಬಂದಿದ್ದೇವೆ. ನಮ್ಮ ಪ್ಲಾಟ್ ಗುರುತಿಸಿ ರಸ್ತೆ, ನೀರು, ವಿದ್ಯುತ್ ಸೇರಿದಂತೆ ಮೂಲಭೂತ ಸೌಲಭ್ಯ ಒದಗಿಸಿದರೆ ಗುಡಿಸಲು ಕಟ್ಟಿಕೊಂಡು ಬದುಕುತ್ತೇವೆ."

**– ಆಶ್ರಯ ನಿವೇಶನ ಫಲಾನುಭವಿಗಳು**

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆಶ್ರಯ ನಿವೇಶನದ ಪ್ಲಾಟ್ ಗುರುತಿಸಿಕೊಡುವಂತೆ ಆಗ್ರಹಿಸಿ ಫಲಾನುಭವಿಗಳು ಜಿಲ್ಲಾ ಉಪವಿಭಾಗಾಧಿಕಾರಿಗಳ ಕಾಲಿಗೆರಗಿ ಕೈಮುಗಿದು ಬೇಡಿಕೊಂಡ ಘಟನೆ ನಡೆದಿದೆ.

ಪಟ್ಟಣದ ತಮ್ಮಾತಿಮ್ಮಿ ಗುಡ್ಡದಲ್ಲಿರುವ 16 ಎಕರೆ ಆಶ್ರಯ ನಿವೇಶನದ ಜಮೀನು ವೀಕ್ಷಿಸಲು ಜಿಲ್ಲಾ ಉಪವಿಭಾಗಾಧಿಕಾರಿ ಗಂಗಪ್ಪ ಎಂ. ಅವರು ಆಗಮಿಸಿದ್ದ ವೇಳೆ, ಸುಮಾರು 9 ವರ್ಷಗಳ ಹಿಂದೆ ಹಕ್ಕುಪತ್ರ ಪಡೆದ ಫಲಾನುಭವಿಗಳು ತಮ್ಮ ಸಮಸ್ಯೆಯನ್ನು ಮನವಿ ಮಾಡಿಕೊಂಡರು.

ಫಲಾನುಭವಿಗಳು ಮಾತನಾಡಿ, ಸುಮಾರು 9 ವರ್ಷಗಳ ಹಿಂದೆ ಇಲ್ಲಿನ 16 ಎಕರೆ ಜಮೀನಿನಲ್ಲಿ 448 ಜನರಿಗೆ ಆಶ್ರಯ ನಿವೇಶನದ ಹಕ್ಕುಪತ್ರ ನೀಡಲಾಗಿದೆ. ಅಂದಿನಿಂದಲೇ ಪ್ಲಾಟ್‌ಗಳಿಗೆ ತೆರಿಗೆ ಕಟ್ಟುತ್ತಾ ಬಂದಿದ್ದರೂ ಇದುವರೆಗೂ ಯಾವ ಪ್ಲಾಟ್ ಯಾರದ್ದು ಎಂದು ಗುರುತಿಸಿಕೊಡಲಾಗಿಲ್ಲ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಧರಣಿ, ಸತ್ಯಾಗ್ರಹ ನಡೆಸಿದರೂ ಸಮಸ್ಯೆ ಪರಿಹಾರವಾಗಿಲ್ಲ. ಆಶ್ರಯ ನಿವೇಶನದ ನಿರೀಕ್ಷೆಯಲ್ಲಿದ್ದ ಕೆಲ ಫಲಾನುಭವಿಗಳು ಸ್ವಂತ ಮನೆ ಕನಸಿನಲ್ಲೇ ಸಾವನ್ನಪ್ಪಿದ್ದಾರೆ ಎಂದು ಅವರು ನೋವು ವ್ಯಕ್ತಪಡಿಸಿದರು.

ನಮ್ಮ ಪ್ಲಾಟ್ ಗುರುತಿಸಿಕೊಟ್ಟು ಸಂಪರ್ಕ ರಸ್ತೆ, ನೀರು, ವಿದ್ಯುತ್, ರಸ್ತೆ ಹಾಗೂ ಚರಂಡಿ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿದರೆ ಗುಡಿಸಲು ಕಟ್ಟಿಕೊಂಡು ಬದುಕುತ್ತೇವೆ ಎಂದು ಫಲಾನುಭವಿಗಳಾದ ಶಶಿಕಲಾ ಹಿರೇಮಠ, ರೇವತಿ ಕಟ್ಟಿಮನಿ, ರೇಣುಕಾ ಮುದಕವಿ, ಶಿವಲೀಲಾ ಹಿಪ್ಪರಗಿ, ಹನಮಂತಪ್ಪ ಸುಣಗಾರ, ಸಲೀಂಸಾಬ ಗುಮ್ಮಗೋಳ, ಹನಮಂತಪ್ಪ ಬೂದಿಹಾಳ ಅವರು ಕೈಮುಗಿದು ಮನವಿ ಮಾಡಿದರು.

ಈ ವೇಳೆ ಸ್ಥಳದಲ್ಲಿದ್ದ ಪುರಸಭೆ ಮುಖ್ಯಾಧಿಕಾರಿ ಮಾಂತೇಶ ಬೀಳಗಿ ಅವರಿಂದ ಸಮಸ್ಯೆಯ ಕುರಿತು ಮಾಹಿತಿ ಪಡೆದ ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಈ ಸ್ಥಳ ಜನವಸತಿಗೆ ಯೋಗ್ಯವೇ ಎಂದು ಪ್ರಶ್ನಿಸಿದರು. ಆಶ್ರಯ ನಿವೇಶನಕ್ಕೆ ಸಂಪರ್ಕ ಕಲ್ಪಿಸಲು ಅಗತ್ಯವಿರುವ 8 ಗುಂಟೆ ಜಮೀನು ಖರೀದಿ ಪ್ರಕ್ರಿಯೆಯನ್ನು ಸೋಮವಾರದೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದರು.

ಹಕ್ಕುಪತ್ರ ಪಡೆದ 448 ಫಲಾನುಭವಿಗಳಿಗೆ ಕೂಡಲೇ ಪ್ಲಾಟ್ ಗುರುತಿಸಿಕೊಡಬೇಕು. ಅಲ್ಲದೆ ಇಲ್ಲಿ ಬೋರ್‌ವೆಲ್, ವಿದ್ಯುತ್ ಸಂಪರ್ಕ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇನ್ನುಳಿದ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಶಾಸಕರು ಬಂದ ನಂತರ ಪೂರ್ಣಗೊಳಿಸಲು ತಿಳಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಧನಂಜಯ ಎಂ., ಕಂದಾಯ ನಿರೀಕ್ಷಕ ಎನ್.ಎ. ನದಾಫ್, ಪುರಸಭೆ ಅಧಿಕಾರಿ ಮಂಜುನಾಥ ಮುದಗಲ್, ಪ್ರಕಾಶ ಕೊಂಚಿಗೇರಿಮಠ, ಬಸವಣ್ಣೆಪ್ಪ ನಂದೆಣ್ಣವರ, ಸುರೇಶ ಹಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅಭಿವೃದ್ಧಿ ಶೂನ್ಯ, ನಿರಾಶಾದಾಯಕ ಬಜೆಟ್: ರಾಜು ಕುರುಡಗಿ ಟೀಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ 17ನೇ ರಾಜ್ಯ ಬಜೆಟ್ ಅಭಿವೃದ್ಧಿ ಶೂನ್ಯ ಹಾಗೂ ನಿರಾಶಾದಾಯಕವಾಗಿದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ ಟೀಕಿಸಿದ್ದಾರೆ.



ಅವರು ನೀಡಿರುವ ಪತ್ರಿಕಾ ಪ್ರಕಟಣೆಯಲ್ಲಿ, ಚುನಾವಣಾ ಸಂದರ್ಭದಲ್ಲಿ ಘೋಷಿಸಿದ್ದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸರ್ಕಾರ ಸಾಲದ ಮೇಲೆ ಅವಲಂಬಿತವಾಗಿದೆ ಎಂದು ಆರೋಪಿಸಿದರು.

ಉತ್ತರ ಕರ್ನಾಟಕದ ನೀರಾವರಿ, ಕೈಗಾರಿಕೆ ಹಾಗೂ ಕೃಷಿ ಕ್ಷೇತ್ರಗಳ ಅಭಿವೃದ್ಧಿಗೆ ಬಜೆಟ್‌ನಲ್ಲಿ ಯಾವುದೇ ವಿಶೇಷ ಯೋಜನೆಗಳನ್ನು ನೀಡಿಲ್ಲ ಎಂದು ಅವರು ಹೇಳಿದರು. ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಕೈಗಾರಿಕಾ ಯೋಜನೆಗಳೂ ಇಲ್ಲದಿರುವುದು ವಿಷಾದನೀಯ ಎಂದು ಹೇಳಿದರು. ಅಲ್ಪಸಂಖ್ಯಾತರ ಓಲೈಕೆಗೆ ಹೆಚ್ಚು ಒತ್ತು ನೀಡಲಾಗಿದೆ ಎಂದು ಆರೋಪಿಸಿದ ಅವರು, ಬಹುಸಂಖ್ಯಾತ ಹಾಗೂ ಬಡ ವರ್ಗದ ಜನರಿಗೆ ಬಜೆಟ್‌ನಲ್ಲಿ ನ್ಯಾಯ ಸಿಕ್ಕಿಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಎಸ್‌ಸಿ, ಎಸ್‌ಟಿ ಅನುದಾನ ಬಳಕೆಯ ಕುರಿತು ಸ್ಪಷ್ಟತೆ ಇಲ್ಲ ಎಂದು ಹೇಳಿದ ಅವರು, ಗ್ರಾಮೀಣ ರಸ್ತೆ ಅಭಿವೃದ್ಧಿಗೂ ಯಾವುದೇ ವಿಶೇಷ ಕ್ರಮ ಕೈಗೊಳ್ಳಲಾಗಿಲ್ಲ ಎಂದು ದೂರಿದರು. ಸರ್ಕಾರ ಆದಾಯ ಸಂಗ್ರಹಣೆಯಲ್ಲಿ ವಿಫಲವಾಗಿದ್ದು, ಸಾಲದ ಮೇಲೆ ರಾಜ್ಯವನ್ನು ನಡೆಸುತ್ತಿರುವಂತೆ ಕಾಣುತ್ತಿದೆ ಎಂದು ರಾಜು ಕುರುಡಗಿ ಅಭಿಪ್ರಾಯಪಟ್ಟಿದ್ದಾರೆ.

## ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ

▶▶ ಮೊದಲನೇ ಪುಟದಿಂದ

ಅನುಪಾತವಾಗಿ ಶೈಕ್ಷಣಿಕ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಸಮರ್ಪಕ ಮೀಸಲಾತಿ ನೀಡಬೇಕು ಎಂದು ಒತ್ತಾಯಿಸಿದರು.


ಒಳಮೀಸಲಾತಿ ಸಂಪೂರ್ಣ ಜಾರಿಯಾಗುವವರೆಗೆ ಯಾವುದೇ ರೀತಿಯ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಬಾರದು. ಚುನಾವಣೆಗೆ ಮುನ್ನ ನೀಡಿದ್ದ ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಮರೆತಿದೆ ಎಂದು ಆರೋಪಿಸಿ, ಮುಂದಿನ ಚುನಾವಣೆಯಲ್ಲಿ ಮಾದಿಗ ಸಮುದಾಯ ಸೂಕ್ತ ಉತ್ತರ ನೀಡಲಿದೆ ಎಂದು ಎಚ್ಚರಿಸಿದರು.

ಈ ವೇಳೆ ಫಕೀರೇಶ ಭಜಕ್ಕನವರ, ಅನಿಲ್ ಮುಳಗುಂದ, ಮನೋಹರ ಕರ್ಜಗಿ, ಬಸವಣ್ಣೆಪ್ಪ ನಂದೆಣ್ಣವರ, ರಾಮಣ್ಣ ಅಡಗಿಮನ, ರಮೇಶ ಸಗಡದವರ ಸೇರಿದಂತೆ ಹಲವರು ಮಾತನಾಡಿದರು. ಪ್ರತಿಭಟನೆಯಲ್ಲಿ ಚಂದ್ರು ದೊಡ್ಡಮನಿ, ನಾಗರಾಜ ದೊಡ್ಡಮನಿ, ಮಹಾಂತೇಶ ಗುಡಿಸಲಮನಿ, ದೇವಪ್ಪ ನಂದೆಣ್ಣವರ, ಯಲ್ಲಪ್ಪ ಹಂಜಗಿ, ಜಗದೀಶ ಹುಲಿಗೆಮ್ಮನವರ, ಬಸವರಾಜ ಹಿರೇಮನಿ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಮನವಿಯನ್ನು ತಹಸೀಲ್ದಾರ ಧನಂಜಯ ಎಂ. ಸ್ವೀಕರಿಸಿದರು.

## ದಿಕ್ಕು ದೆಸೆ ಇಲ್ಲದ ಭೋಗಸ್ ಬಜೆಟ್ : ಎಂ.ಎಂ. ಹಿರೇಮಠ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವ ಸಿದ್ದರಾಮಯ್ಯ ಅವರು ಮಂಡಿಸಿದ 2026–27ನೇ ಸಾಲಿನ ಮುಂಗಡ ಪತ್ರವು ಅಭಿವೃದ್ಧಿ ಶೂನ್ಯ ಮತ್ತು ದಿಕ್ಕು ದೆಸೆ ಇಲ್ಲದ ಭೋಗಸ್ ಬಜೆಟ್ ಆಗಿದೆ ಎಂದು ಹಿರಿಯ ನ್ಯಾಯವಾದಿ ಹಾಗೂ ಬಿಜೆಪಿ ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಟೀಕಿಸಿದ್ದಾರೆ.



ಅವರು ಪತ್ರಿಕಾ ಹೇಳಿಕೆಯಲ್ಲಿ ಚುನಾವಣೆಯಲ್ಲಿ ಘೋಷಿಸಿದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸರ್ಕಾರ ದೊಡ್ಡ ಪ್ರಮಾಣದ ಸಾಲದ ಮೇಲೆ ಅವಲಂಬಿತವಾಗಿದೆ ಎಂದು ಆರೋಪಿಸಿದರು.

ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲು ವರ್ಷಕ್ಕೆ ಸುಮಾರು 60 ಸಾವಿರ ಕೋಟಿ ರೂಪಾಯಿ ಅಗತ್ಯವಿದ್ದು, ಸರ್ಕಾರ ಕಳೆದ 5–6 ತಿಂಗಳಲ್ಲಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಲು ವಿಫಲವಾಗಿದೆ ಎಂದು ಹೇಳಿದರು. ಕಳೆದ 3 ವರ್ಷಗಳಲ್ಲಿ ರಾಜ್ಯ ಸರ್ಕಾರ ಲಕ್ಷಾಂತರ ಕೋಟಿ ರೂಪಾಯಿ ಸಾಲ ಮಾಡಿದ್ದು, ಕರ್ನಾಟಕ ದೇಶದಲ್ಲಿ ಹೆಚ್ಚು ಸಾಲ ಪಡೆದ ರಾಜ್ಯಗಳ ಪೈಕಿ ಎರಡನೇ ಸ್ಥಾನದಲ್ಲಿದೆ ಎಂದು ಹೇಳಿದರು.

ಶಿಕ್ಷಣ, ಆರೋಗ್ಯ ಹಾಗೂ ನೀರಾವರಿ ಕ್ಷೇತ್ರಗಳಿಗೆ ಹಿಂದಿನ ವರ್ಷಕ್ಕಿಂತ ಕಡಿಮೆ ಅನುದಾನ ನೀಡಲಾಗಿದೆ ಎಂದು ಆರೋಪಿಸಿದ ಅವರು, ಅಲ್ಪಸಂಖ್ಯಾತರ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಇತರ ಸಮುದಾಯಗಳಿಗೆ ಅನ್ಯಾಯವಾಗಿದೆ ಎಂದು ಅಭಿಪ್ರಾಯಪಟ್ಟರು. ಸರ್ಕಾರದ ಬಜೆಟ್ ಕೇವಲ ಜನರನ್ನು ಮರುಳು ಮಾಡುವ ಪ್ರಯತ್ನವಾಗಿದೆ ಎಂದು ಹಿರೇಮಠ ಹೇಳಿದ್ದಾರೆ.

## ಅಭಿವೃದ್ಧಿ–ತಂತ್ರಜ್ಞಾನಕ್ಕೆ ಒತ್ತು ನೀಡಿದ ರಾಜ್ಯ ಬಜೆಟ್: ಬಸವರಾಜ ಪಲ್ಲೇದ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 2026–27ನೇ ಸಾಲಿನ ರಾಜ್ಯ ಬಜೆಟ್ ಅಭಿವೃದ್ಧಿ ಮತ್ತು ತಂತ್ರಜ್ಞಾನಕ್ಕೆ ಪೂರಕವಾಗಿದ್ದು, ರಾಜ್ಯದ ಸಮಗ್ರ ಪ್ರಗತಿಗೆ ದಿಕ್ಕು ತೋರಿಸುವಂತಾಗಿದೆ ಎಂದು ಮುಖಂಡ ಬಸವರಾಜ ಪಲ್ಲೇದ ಅಭಿಪ್ರಾಯ ವ್ಯಕ್ತಪಡಿಸಿದರು.



ಈ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಸುಮಾರು 4,48,004 ಕೋಟಿ ಗಾತ್ರದ ಬೃಹತ್ ಬಜೆಟ್ ರಾಜ್ಯದ ಅಭಿವೃದ್ಧಿ ಹಾಗೂ ಜನಕಲ್ಯಾಣಕ್ಕೆ ಪೂರಕವಾಗಿದೆ ಎಂದು ಹೇಳಿದರು. ಸುಮಾರು 38 ಲಕ್ಷ ರೈತರಿಗೆ 30,000 ಕೋಟಿ ಮೊತ್ತದ ಶೂನ್ಯ ಬಡ್ಡಿದರದ ಕೃಷಿ ಸಾಲ ನೀಡುವ ಘೋಷಣೆ ರೈತರಿಗೆ ದೊಡ್ಡ ನೆರವಾಗಲಿದೆ. ಅದೇ ರೀತಿ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ 56,432 ಹುದ್ದೆಗಳ ಭರ್ತಿ ಪ್ರಕ್ರಿಯೆ ಆರಂಭಿಸಿರುವುದು ಯುವಜನತೆಗೆ ಆಶಾದಾಯಕ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಬೆಂಗಳೂರು ನಗರದಲ್ಲಿ ಅತ್ಯಾಧುನಿಕ ಕೃತಕ ಬುದ್ಧಿಮತ್ತೆ (AI) ಕೇಂದ್ರ ಹಾಗೂ ರಾಯಚೂರಿನ ಐಐಐಟಿ ಸಂಸ್ಥೆಯಲ್ಲಿ 5 ಕೋಟಿ ವೆಚ್ಚದಲ್ಲಿ ಎಐ ಕೇಂದ್ರ ಸ್ಥಾಪನೆ ಮಾಡುವ ನಿರ್ಧಾರ ರಾಜ್ಯವನ್ನು ಜಾಗತಿಕ ತಂತ್ರಜ್ಞಾನ ಹಬ್ ಆಗಿ ಮುಂದುವರಿಸಲು ಸಹಕಾರಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಶಿಕ್ಷಣ ಕ್ಷೇತ್ರದಲ್ಲಿಯೂ 800 ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ಆಗಿ ಮೇಲ್ದರ್ಜೆಗೇರಿಸಲು 3,900 ಕೋಟಿ ಮೀಸಲಿಡಲಾಗಿದೆ ಎಂದು ತಿಳಿಸಿದರು.

ಮಹಿಳಾ ಸಬಲೀಕರಣದ ದೃಷ್ಟಿಯಿಂದ ಗೃಹಲಕ್ಷ್ಮಿ ಯೋಜನೆಗೆ 28,608 ಕೋಟಿ ಮೀಸಲಿಡಲಾಗಿದ್ದು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಅತಿಥಿ ಶಿಕ್ಷಕರ ಗೌರವಧನ ಹೆಚ್ಚಿಸಿರುವುದು ಶ್ರಮಿಕ ವರ್ಗಕ್ಕೆ ನೆಮ್ಮದಿ ತಂದಿದೆ ಎಂದು ಹೇಳಿದರು.

ಒಟ್ಟಾರೆ ಪಂಚ ಗ್ಯಾರಂಟಿ ಯೋಜನೆಗಳ ಮುಂದುವರಿಕೆಯ ಜೊತೆಗೆ ಕೃಷಿ, ಶಿಕ್ಷಣ, ತಂತ್ರಜ್ಞಾನ, ಉದ್ಯೋಗ ಹಾಗೂ ಜನಕಲ್ಯಾಣಕ್ಕೆ ಮಹತ್ವ ನೀಡಿರುವ ಈ ಬಜೆಟ್ ಸಮಾಜದ ಎಲ್ಲಾ ವರ್ಗಗಳ ಅಭಿವೃದ್ಧಿಗೆ ದಾರಿ ಮಾಡಿಕೊಡುತ್ತದೆ ಎಂದು ಬಸವರಾಜ ಪಲ್ಲೇದ ಅಭಿಪ್ರಾಯ ವ್ಯಕ್ತಪಡಿಸಿದರು.

## ಮಾ.21ರ ಶೃಂಗೇರಿ ಗಾಯತ್ರಿ ಪುರಶ್ಚರಣೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ



ಜಗದ್ಗುರುಗಳ ವರ್ಧಂತಿ ಉತ್ಸವದ ಅಂಗವಾಗಿ ಮಾ.21ರಂದು ಶೃಂಗೇರಿಯಲ್ಲಿ ನಡೆಯುವ ಗಾಯತ್ರಿ ಪುರಶ್ಚರಣ ಕಾರ್ಯಕ್ರಮಕ್ಕೆ ಗದಗ ಜಿಲ್ಲೆಯಿಂದ ನೂರಕ್ಕೂ ಹೆಚ್ಚು ಭಕ್ತರು ಮಾ.20ರಂದು ತೆರಳುವ ಯೋಜನೆ ರೂಪಿಸಲಾಗಿದೆ. ನರೇಗಲ್ಲ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಯುವಕರು, ಗೃಹಸ್ಥರು ಮತ್ತು ಧಾರ್ಮಿಕ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಸಂಘಟಕರು ಕರೆ ನೀಡಿದ್ದಾರೆ.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇದೇ ಮಾ.21ರಂದು ಶನಿವಾರ ಶೃಂಗೇರಿ ಶಾರದಾ ಪೀಠದಲ್ಲಿ ಜಗದ್ಗುರುಗಳ ವರ್ಧಂತಿ ಉತ್ಸವದ ನಿಮಿತ್ತ ನಡೆಯಲಿರುವ ಗಾಯತ್ರಿ ಪುರಶ್ಚರಣ ಕಾರ್ಯಕ್ರಮಕ್ಕೆ ನರೇಗಲ್ಲ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪುರುಷರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಗದಗ ಜಿಲ್ಲಾ ಶಾಂಕರ ತತ್ವ ಪ್ರಸಾರ ಸಂಚಾಲಕ ಗಿರೀಶ ಪಂತರ ಮನವಿ ಮಾಡಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಈ ಕುರಿತು ನಡೆದ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು. ಇಂದಿನ ದಿನಗಳಲ್ಲಿ ಹಿಂದೂ ಧರ್ಮ ಅಧೋಗತಿಯತ್ತ ಸಾಗುತ್ತಿರುವ ಪರಿಸ್ಥಿತಿ ಕಾಣಿಸುತ್ತಿದೆ. ಇದನ್ನು ತಪ್ಪಿಸಲು ಶೃಂಗೇರಿ ಜಗದ್ಗುರುಗಳು ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಅದಕ್ಕೆ ಬೆಂಬಲ ನೀಡುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಮಾ.20ರಂದು ಗದಗ ಜಿಲ್ಲೆಯಿಂದ ನೂರಕ್ಕಿಂತಲೂ ಹೆಚ್ಚು ಭಕ್ತರು ಶೃಂಗೇರಿಗೆ ತೆರಳುವ ಯೋಜನೆ ಇದ್ದು, ಇದರಲ್ಲಿ ಯುವಕರು, ಗೃಹಸ್ಥರು ಸೇರಿದಂತೆ ಆಸಕ್ತರೆಲ್ಲರೂ ಭಾಗವಹಿಸಬೇಕೆಂದು ಅವರು ಕೋರಿದರು.

ಗಣೇಶಭಟ್ಟ ಪುರಾಣಿಕ ಮಾತನಾಡಿ, ಗಾಯತ್ರಿ ಮಂತ್ರ ಪಠಣೆಯಿಂದ ವ್ಯಕ್ತಿಯ ಆತ್ಮಶಕ್ತಿ ಹೆಚ್ಚುತ್ತದೆ ಮತ್ತು ಜೀವನದಲ್ಲಿ ಧೈರ್ಯ, ಶಕ್ತಿ ದೊರೆಯುತ್ತದೆ ಎಂದು ತಿಳಿಸಿದರು. ನರೇಗಲ್ಲ ಹಾಗೂ ಸುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಅವರು ಹೇಳಿದರು.

ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಮಾತನಾಡಿ, ನರೇಗಲ್ಲ ಬ್ರಹ್ಮ ಸಮಾಜದಲ್ಲಿನ ಒಗ್ಗಟ್ಟು ನಮಗೆಲ್ಲ ಮಾದರಿಯಾಗಿದೆ. ಜಿಲ್ಲೆಯಾದ್ಯಂತ ನೂರಕ್ಕಿಂತ ಹೆಚ್ಚು ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸೋಣ ಎಂದರು.

ಸಮಾಜದಲ್ಲಿನ ವಿವಾಹ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಜಿಲ್ಲಾ ಮಟ್ಟದಲ್ಲಿ ವಧು–ವರರ ಸಮಾವೇಶ ನಡೆಸುವ ಯೋಚನೆಯೂ ಇದೆ ಎಂದು ತಿಳಿಸಿದರು.

ಸಭೆಯಲ್ಲಿ ರಘುನಾಥ ಕೊಂಡಿ, ಸಂಜೀವ ಕುಲಕರ್ಣಿ, ಡಾ. ನಾಗರಾಜ ಗ್ರಾಮಪುರೋಹಿತ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನಿಲ ತೆಂಬದಮನಿ, ಕೋಶಾಧ್ಯಕ್ಷ ಕೃಷ್ಣಾಜಿ ನಾಡಿಗೇರ, ಸೀಮಾ ಕೊಂಡಿ ಮಾತನಾಡಿದರು. ಶಿವಣ್ಣ ಕುಲಕರ್ಣಿ (ಕೊಳ್ಳಿ) ಅಧ್ಯಕ್ಷತೆ ವಹಿಸಿದ್ದರು.

ಸಭೆಯಲ್ಲಿ ಶ್ರೀಪಾದಭಟ್ಟ ಜೋಷಿ, ಗುರುರಾಜ ಕುಲಕರ್ಣಿ, ಬಿ.ಎಲ್. ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ವಿಶ್ವನಾಥ ಗ್ರಾಮಪುರೋಹಿತ, ಎ.ಜಿ. ಕುಲಕರ್ಣಿ, ಆನಂದ ಕುಲಕರ್ಣಿ, ನಾಗೇಶಭಟ್ಟ ಗ್ರಾಮಪುರೋಹಿತ, ಆನಂದ ಕಾಳೆ, ರಂಗನಾಥ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ರಾಮಕೃಷ್ಣ ಸದರಜೋಷಿ ಹಾಗೂ ಅನಸೂಯಾ ಮಹಿಳಾ ಮಂಡಳದ ಸದಸ್ಯರು ಉಪಸ್ಥಿತರಿದ್ದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಕಾರ್ಯಕ್ರಮ ನಿರ್ವಹಿಸಿದರು.

## ಧಾರವಾಡದಲ್ಲಿ ಶಾಂತಿ–ಸೌಹಾರ್ದತೆಯ ಹೋಳಿ ಸಂಭ್ರಮ : ನೈಸರ್ಗಿಕ ಬಣ್ಣಗಳಿಂದ ಹಬ್ಬ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ನಗರದ ನಾರಾಯಣಪುರ ಪ್ರದೇಶದಲ್ಲಿ ಹೋಳಿ ಹಬ್ಬವನ್ನು ಶಾಂತಿ ಹಾಗೂ ಸಂಭ್ರಮದ ವಾತಾವರಣದಲ್ಲಿ ಆಚರಿಸಲಾಯಿತು. ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯುತ್ತಿದ್ದರೂ ವಿದ್ಯಾರ್ಥಿಗಳು, ಯುವಕರು, ಮಹಿಳೆಯರು ಹಾಗೂ ಹಿರಿಯರು ಉತ್ಸಾಹದಿಂದ ಹಬ್ಬದಲ್ಲಿ ಭಾಗವಹಿಸಿದರು.

ಹಬ್ಬದ ಅಂಗವಾಗಿ ರಾಸಾಯನಿಕ ಮಿಶ್ರಣವಿಲ್ಲದ ನೈಸರ್ಗಿಕ ಬಣ್ಣಗಳನ್ನು ಬಳಸಿಕೊಂಡು ಪರಸ್ಪರ ಮುಖಕ್ಕೆ ಬಣ್ಣ ಹಚ್ಚಿ, ಬಣ್ಣದ ನೀರನ್ನು ಎರಚಿಕೊಂಡು ಸಂತೋಷ ವ್ಯಕ್ತಪಡಿಸಿದರು.

ಮಕ್ಕಳು ಹಾಗೂ ಯುವಕರು ಹಾಡು–ನಗುವಿನ ನಡುವೆ ಹಬ್ಬವನ್ನು ಅದ್ದೂರಿಯಾಗಿ ಆಚರಿಸಿದರು. ಬೆಳಗ್ಗಿನಿಂದ ಆರಂಭವಾದ ಹೋಳಿ ಸಂಭ್ರಮ ಮಧ್ಯಾಹ್ನದವರೆಗೆ ಮುಂದುವರಿಯಿತು.

ಒಟ್ಟಾರೆ ಧಾರವಾಡದ ನಾರಾಯಣಪುರ ಪ್ರದೇಶದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದ ಸಂದೇಶ ಸಾರುವಂತೆ ಹೋಳಿ ಹಬ್ಬ ಯಶಸ್ವಿಯಾಗಿ ಆಚರಿಸಲಾಯಿತು.

## ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಸಾಲದ ಭಾರ ಹೆಚ್ಚಾಗಿದೆ: ಹಿರೇಮನಿಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ಅಲ್ಪಸಂಖ್ಯಾತರ ಪರ ಒಲೈಕೆ ಹೊಂದಿದೆ ಎಂದು ಬಿಜೆಪಿ ಯುವ ಮುಖಂಡ ಶಿವು ಹಿರೇಮನಿಪಾಟೀಲ ಟೀಕಿಸಿದ್ದಾರೆ.



ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸರ್ಕಾರ ಘೋಷಿಸಿರುವ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಹೆಚ್ಚಿನ ಸಾಲದ ಹೊರೆ ಹೊತ್ತಿದೆ ಎಂದು ಆರೋಪಿಸಿದರು. ಈ ಬಜೆಟ್‌ನಲ್ಲಿ ಅಲ್ಪಸಂಖ್ಯಾತರಿಗೆ ಹೆಚ್ಚಿನ ಅವಕಾಶಗಳನ್ನು ನೀಡಲಾಗಿದ್ದು, ಬಹುಸಂಖ್ಯಾತ ಹಿಂದು ಸಮುದಾಯಕ್ಕೆ ಅನ್ಯಾಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ನೀತಿಗಳನ್ನು ಅವರು ಪ್ರಶ್ನಿಸಿದ್ದಾರೆ.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
**ಕಾರ್ಯಪಾಲಕ ಅಭಿಯಂತರರ ಕಛೇರಿ, ಕ.ನೀ.ನಿ.ನಿ.,**
**ಮ.ಬ.ದ.ಕಾ.ನಿ. ವಿಭಾಗ ನಂ. 1, ನರಗುಂದ ಜಿಲ್ಲೆ : ಗದಗ**
**Tel No. 08377-244236 e-mail : knnlmrbccdiv1@gmail.com**
ಸಂ:ಕನೀನಿನಿ/ಮಬದಕಾನಿ–1/ಪಿಬಿ/2025–26/1721 ದಿನಾಂಕ: 05–03–2026

**ಅಲ್ಪಾವಧಿ ಟೆಂಡರ ಪ್ರಕಟಣೆ**

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪರವಾಗಿ ಈ ವಿಭಾಗದಡಿ ಬರುವ ಕಾಮಗಾರಿಗೆ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ 4ನೇ ದರ್ಜೆ ಮೇಲ್ಪಟ್ಟ ಗುತ್ತಿಗೆದಾರರಿಂದ ಶೇಕಡಾವಾರು (KW-1) ಟೆಂಡರನ್ನು ಏಕಲಕೋಟೆ ಪದ್ಧತಿಯಲ್ಲಿ ಈ ಕೆಳಗಿನಂತೆ ಅಹ್ವಾನಿಸಲಾಗಿದೆ.

(1) **Work Indent No:-4067** , (2) ಕಾಮಗಾರಿಯ ಅಂದಾಜು ಮೊತ್ತ: ರೂ. **26.50** ಲಕ್ಷಗಳು, (3) ಇ.ಎಂ.ಡಿ ಮೊತ್ತ ರೂ: **44500.00** ಗಳು (4) ಟೆಂಡರ ಸಲ್ಲಿಸುವ ಕೊನೆಯ ದಿನಾಂಕ: **13–03–2026** ರಂದು ಸಂಜೆ 4.00 ಗಂಟೆಯವರೆಗೆ. (5) ಟೆಂಡರ ತೆರೆಯುವ ದಿನಾಂಕ: **16–03–2026** ರಂದು ಬೆಳಿಗ್ಗೆ 11.00 ಗಂಟೆ ಇತರೆ ವಿವರಗಳನ್ನು ಕೆ.ಪಿ.ಪಿ.ಪಿ ಪೋರ್ಟಲ್ ವೆಬ್‌ಸೈಟ್ ಮುಖೇನ ಮೂಲಕ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಈ ಕಚೇರಿ ದೂರವಾಣಿ ಸಂಖ್ಯೆ: **08377–244236** ನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

**ಸಹಿ/– ಕಾರ್ಯಪಾಲಕ ಅಭಿಯಂತರರು,**
**ಕನೀನಿನಿ ಮಬದಕಾನಿ ವಿಭಾಗ ನಂ.1 ನರಗುಂದ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/693/2025–26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka